MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 309 | ಶುಕ್ರವಾರ : 26-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 309 | FRIDAY : 26-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಎಸ್ ಟಿ ಸಮುದಾಯಕ್ಕೆ ಪ್ರಬಲ ಜನಾಂಗ ಸೇರ್ಪಡೆ ವಿರೋಧಿಸಿ ಬೃಹತ್ ಪ್ರತಿಭಟನೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25–**ಪರಿಶಿಷ್ಟ ಪಂಗಡಕ್ಕೆ (ಎಸ್.ಟಿ) ಪ್ರಬಲ ಸಮಾಜಗಳನ್ನು ಸೇರ್ಪಡೆ ಮಾಡುತ್ತಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿ ಹಾಗೂ ನಕಲಿ ಜಾತಿ ಪ್ರಮಾಣ ಪತ್ರ ನೀಡುತ್ತಿರುವುದನ್ನು ವಿರೋಧಿಸಿ ತಾಲೂಕಾ ವಾಲ್ಮೀಕಿ ನಾಯಕ ಸಂಘಟನೆಗಳ ಒಕ್ಕೂಟದಿಂದ ಗುರುವಾರ ಪಟ್ಟಣದ ವಾಲ್ಮೀ ಕಿ ವೃತ್ತದಿಂದ ತಹಸೀಲ್ದಾರ ಕಛೇರಿವರೆಗೆ ಬೃಹತ್ ಪ್ರತಿಭಟನೆ ನಡೆಸಿದರು.




ರಾಜ್ಯ ಸರ್ಕಾರವು ಪರಿಶಿಷ್ಟ ಪಂಗಡದಲ್ಲಿ ಆರ್ಥಿಕವಾಗಿ, ಸಾಮಾಜಿಕ ವಾಗಿ ಹಾಗೂ ಶೈಕ್ಷಣಿಕವಾಗಿ ಪ್ರಬಲವಾಗಿರುವ ಸಮುದಾಯಗಳನ್ನು ದುರುದ್ದೇಶ ದಿಂದ ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಪಾರಸ್ಸು ಮಾಡಿದೆ. ಯಾವುದೇ ಬುಡಕಟ್ಟು ಸಂಸ್ಕೃತಿ ಹಾಗೂ ಗುಣಲಕ್ಷಣಗಳು ಇಲ್ಲದ ಸಮುದಾ ಯಗಳನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ ಎಂದು ಕೇಂದ್ರ ಕುಲಶಾಸ್ತ್ರ ಅಧ್ಯಯನ ತಂಡ ಸ್ಪಷ್ಟವಾಗಿ ತಿಳಿಸಿದೆ. ಆದರೂ, ಸಿಎಂ ಸಿದ್ದರಾಮಯ್ಯ ಅವರು ಸ್ವಜನಪಾತಕ್ಕೆ ಒಳಗಾಗಿ ಎರಡೆರಡು ಬಾರಿ ಕುಲಶಾಸ್ತ್ರ ಅಧ್ಯಯನ ನಿಯಮಗಳನ್ನು ಗಾಳಿಗೆ ತೂರಿ ಪ್ರಬಲ ಸಮುದಾಯಗಳನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ನಿರಂತರವಾಗಿ ಪ್ರಯತ್ನ ಮಾಡುತಿದ್ದಾರೆ. ಈ ಮೂಲಕ ಸಿಎಂ ಸಿದ್ರಾಮಯ್ಯ ಅವರು ರಾಜ್ಯದಲ್ಲಿ ಜಾತಿ ಜಾತಿಗಳ ನಡುವೆ ಸಾಮರಸ್ಯ ಕದಡಿಸುವಂತಹ ವಾತಾವರಣ ನಿರ್ಮಿಸುತ್ತಿದ್ದಾರೆ ಆಕ್ರೋಶ ವ್ಯಕ್ತಪಡಿಸಿದರು.




ಸಿಎಂ ಸಿದ್ದರಾಮಯ್ಯನವರ ಸ್ವಜನಪಾತ ನೀತಿಯಿಂದ ಎಸ್.ಟಿ ವರ್ಗದ ಬುಡಕಟ್ಟು ಸಂಸ್ಕೃತಿ ಇರುವ ಶೋಷಿತ ವರ್ಗಗಳಿಗೆ ಅನ್ಯಾಯ ಆಗುತ್ತಿದೆ. ರಾಜ್ಯ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ತನ್ನ ನಿರ್ಧಾರವನ್ನು ಕೈಬಿಡಬೇಕು. ಹಾಗೂ ರಾಜ್ಯದಲ್ಲಿ ಹೆಚ್ಚುತಿರುವ ನಕಲಿ ಜಾತಿ ಪ್ರಮಾಣ ಪತ್ರ ಹಾವಳಿಯನ್ನು ತಡೆಯ ಬೇಕು. ಇಲ್ಲವಾದರೆ ರಾಜನಳ್ಳಿಯ ವಾಲ್ಮೀಕಿ ಗುರುಪೀಠದ ಸ್ವಾಮೀಜಿಗಳ ನಿರ್ದೇಶನದಂತೆ ರಾಜ್ಯ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಜನಾಭಿಪ್ರಾಯ ಸಂಗ್ರಹಿಸಿ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ತಹಸೀಲ್ದಾರ ಮುಖಾಂತರ ಮುಖ್ಯಮಂತ್ರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಗಂಗಾಧರ ನಾಯಕ, ಮುಖಂಡರಾದ ನರಸಿಂಹ ನಾಯಕ, ಶಿವರಾಜ ನಾಯಕ ಬಲ್ಲಟಗಿ, ಬುಡ್ಡಪ್ಪ ನಾಯಕ ಮಲ್ಲಿನ ಮಡುಗು, (2ನೇಪುಟಕ್ಕೆ)

## ಮಾನ್ವಿಯಲ್ಲಿ ಅವ್ಯವಸ್ಥೆ : ಪುರಸಭೆ ಸಾಮಾನ್ಯ ಸಭೆಯಲ್ಲಿ ಸದಸ್ಯರ ಅಸಮಾಧಾನ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25–** ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಪುರಸಭೆಯ ಪ್ರಭಾರಿ ಅಧ್ಯಕ್ಷರಾದ ಮೀನಾಕ್ಷಿ ರಾಮಕೃಷ್ಣ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಹಿರಿಯ ಸದಸ್ಯರಾದ ರಾಜಾ ಮಹೇಂದ್ರ ನಾಯಕ ಮಾತನಾಡಿ ಪಟ್ಟಣದಲ್ಲಿನ ಜನರಿಗೆ ಮೂಲ ಸೌಕರ್ಯಗಳನ್ನು ಕಲ್ಪಿಸುವುದಕ್ಕಾಗಿ ಸರ್ಕಾರದಿಂದ ಪುರಸಭೆಗೆ ಅಂದಾಜು 4ಕೋಟಿಗೂ ಹೆಚ್ಚು ಅನುದಾನ ದೊರೆಯುತರು ಕೂಡ ವಾರ್ಡಗಳಲ್ಲಿನ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ.



ಪುರಸಭೆ ಸದಸ್ಯರು ತಮ್ಮ ವಾರ್ಡಗಳಿಗೆ ಅಗತ್ಯವಿರುವ ಮೂಲಸೌಕರ್ಯಗಳ ಕುರಿತು ಬೇಡಿಕೆ ಇಟ್ಟಲ್ಲಿ ಅಧಿಕಾರಿಗಳು ಅವುಗಳನ್ನು ಪರಿಶೀಲಿಸಿ ಕಾಮಗಾರಿಗಳ ಅಂದಾಜು ಪಟ್ಟಿ ತಯಾರಿಸಿ ಟೆಂಡರ್ ಕರೆದು ಕಾಮಗಾರಿಗಳನ್ನು ಕೈಗೊಳ್ಳುವುದಿಲ್ಲ ಪುರಸಭೆ ವ್ಯಾಪ್ತಿಗೆ ಬರುವ ಇಲಾಖೆಗಳಾದ ವಿದ್ಯುತ್,ಅರಣ್ಯ, ಆರೋಗ್ಯ ಇಲಾಖೆ, ಕುಡಿಯುವ ನೀರಿನ ಯೋಜನೆಯ ಅಧಿಕಾರಿಗಳು,ಕಂದಾಯ ಇಲಾಖೆ ಅಧಿಕಾರಿಗಳು ಪುರಸಭೆ ಸದಸ್ಯರ ಮನವಿಗೆ ಸ್ಪಂದಿಸುತ್ತಿಲ್ಲ.

ಅಮೃತ –2 ಯೋಜನೆಯಡಿಯಲ್ಲಿ ಪಟ್ಟಣದಲ್ಲಿನ ಎಲ್ಲಾ 27 ವಾರ್ಡಗಳಿಗೆ ನೀರು ಪೂರೈಕೆಗಾಗಿ ನೀರನ್ನು ಸಂಗ್ರಹಿಸುವುದಕ್ಕಾಗಿ ಇನ್ನು ಟ್ಯಾಂಕ್‌ಗಳ ನಿರ್ಮಾಣವಾಗಿಲ್ಲ ಸಿ.ಸಿ.ರಸ್ತೆಗಳನ್ನು ಅಗೆದು ಪೈಪ್ ಲೈನ್ ಹಾಕಲಾಗುತ್ತಿದ್ದು ಮರಳಿ ಸಿ.ಸಿ.ರಸ್ತೆ ನಿರ್ಮಾಣ ಮಾಡದೆ ಇರುವುದರಿಂದ ಜನರ ಸಂಚಾರಕ್ಕೆ ತೊಂದರೆಯಾಗುತ್ತಿದೆ ನೂತನ ಬಡವಣೆಗಳಲ್ಲಿರುವ ಲಭ್ಯವಿರುವ ಸಿ.ಎ.ನಿವೇಶನಗಳನ್ನು ಪತ್ರಿಕಾಭವನ,ವಾಲ್ಮೀಕಿ ಭವನ,ಡಾ.ಬಿ.ಆರ್.ಅಂಬೇಡ್ಕರ್ ಭವಮ,ಡಾ.ಜಗಜೀವನ್‌ರಾಮ ಭವನ, ಕನ್ನಡ ಸಾಹಿತ್ಯ ಭವನ, ದೇವರಾಜ ಅರಸು ಭವನಗಳ ನಿರ್ಮಾಣಕ್ಕೆ ಹಂಚಿಕೆ ಮಾಡುವುದಕ್ಕೆ ಕ್ರಮ ಕೈಗೊಳ್ಳಿ. ಪಟ್ಟಣದಲ್ಲಿ ಕೆರೆ ಹಾಗೂ ಹತ್ತಿರದಲ್ಲಿ ನದಿ ಇದ್ದರು ಕೂಡ ಪುರಸಭೆಯಿಂದ ಪಟ್ಟಣದ ಜನರಿಗೆ 8 ದಿನಗಳಿಗೆ ಒಮ್ಮೆ ಮಾತ್ರ ಕುಡಿಯುವ (2ನೇ ಪುಟಕ್ಕೆ)

## ಭಕ್ತರ ಸಹಕಾರದಿಂದ ದೇವಾಲಯಗಳ ಅಭಿವೃದ್ಧಿ: ಮಾಜಿ ಸಂಸದ ಬಿ.ವಿ.ನಾಯಕ

ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.25–**ಕಾರ್ಯ ಸಿದ್ದಿ, ಮನಸ್ಸಿಗೆ ನೆಮ್ಮದಿ, ಕೋರಿಕೆಯನ್ನು ಈಡೇರಿಸುವ ಗಿಡದ ಮಾರಮ್ಮ ದೇವಿಯ ಕೃಪೆಯಿಂದ ದೇವಾಲಯದ ಅಭಿವೃದ್ಧಿ ಕಾರ್ಯಗಳು ಸುಗಮವಾಗಿ ನಡೆಯುತ್ತಿವೆ ಎಂದು ಮಾಜಿ ಸಂಸದ ಬಿ.ವಿ.ನಾಯಕ ಹೇಳಿದರು.



ತಾಲೂಕಿನ ರೇಕಲಮರಡಿ ಹೊರವಲಯದ ಗಿಡದ ಮಾರಮ್ಮ ದೇವಿ ದೇವಸ್ಥಾನದ ನೂತನ ಪ್ರವೇಶ ದ್ವಾರವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದರು. ಭಕ್ತರ ಸಹಕಾರದಿಂದ ದೇವಾಲಯ ಇನ್ನಷ್ಟು ಅಭಿವೃದ್ಧಿ ಕಾಣಬೇಕಿದೆ. ದೇವರು ಮತ್ತು ದೇವರ ಮೇಲಿನ ನಂಬಿಕೆ ನಮ್ಮನ್ನು ಮತ್ತಷ್ಟು ಸೇವಾ ಕಾರ್ಯಾದಲ್ಲಿ ತೊಡಗಿಸಿಕೊಳ್ಳಲು ಪ್ರೇರೇಪಿಸುತ್ತದೆ. ಕೆಲವೊಮ್ಮೆ ದೇವರು ತಮಗೆ ಆಗಬೇಕಾದ ಸೇವೆಯನ್ನು ಯಾವುದೋ ರೂಪದಲ್ಲಿ ಮಾಡಿಸಿಕೊಳ್ಳುವ ವಿಸ್ಮಯಕಾರಿ ಘಟನೆಗಳು ನಡೆದಿವೆ. ಅಮರೇಶ ಚವ್ಹಾಣ್ ಅವರು ಬಾಲ್ಯದಿಂದಲೂ ಒಡನಾಟವಿರುವ ಈ ದೇವಾಲಯ ಮತ್ತು ದೇವರೊಂದಿಗೆ ಅವಿನಾಭಾವ ಸಂಬಂಧವಿದೆ. ಹೀಗಾಗಿ ತಮ್ಮ ಸ್ವಂತ ಹಣದಿಂದ ದೇವಸ್ಥಾನಕ್ಕೆ ನೂತನ ಪ್ರವೇಶ ದ್ವಾರವನ್ನು ನಿರ್ಮಿಸಿ ಭಕ್ತಿ ಮೆರೆದಿದ್ದಾರೆ. ಇಲ್ಲಿನ ದೇವಾಲಯ ಭಕ್ತರ ಪಾಲಿಗೆ ಮತ್ತಷ್ಟು ಶಾಂತಿ–ನೆಮ್ಮದಿ ಕೊಡುವ ಕ್ಷೇತ್ರವಾಗಬೇಕು ಎಂದು ಆಶಿಸಿದರು.

ಮಾಜಿ ಜಿಪಂ ಸದಸ್ಯ ದೇವೇಂದ್ರಪ್ಪ, ಶರಣಗೌಡ ಬಿ.ಗಣೇಕಲ್, ಶಂಕ್ರಪ್ಪ ಬಂಡೆಗುಡ್ಡ, ಅಯ್ಯಪ್ಪ ತಾತ ಅಗ್ರಹಾರ, ಅಂಬ್ರೇಶ ಚವ್ಹಾಣ್, ದುರುಗಪ್ಪ ನಾಯಕ ಮಲ್ಲೇದೇವರಗುಡ್ಡ,ಉಮಾಪತಿ ಎಲ್‌ಐಸಿ(2ನೇಪುಟ)

## ಮಾನ್ವಿ ದಸರಾ ಮೈಸೂರು ದಾಸರದಷ್ಟೇ ಪ್ರಖ್ಯಾತಿ ಹೊಂದಿದೆ: ಬಸನಗೌಡ ದದ್ದಲ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25–** ಮೈಸೂರಿನಲ್ಲಿ ನಡೆಯುವ ದಸರಾ ಅಂಬಾರಿ ಮೆರವಣಿಗೆಯನ್ನು ನೋಡುವುದಕ್ಕೆ ದೂರದ ಮೈಸೂರಿಗೆ ಹೋಗುವ ಅಗತ್ಯವಿಲ್ಲ, ಏಕೆಂದರೆ ಮಾನ್ವಿಯ ಕಲ್ಮಠದ ಹಿರಿಯ ಶ್ರೀಗಳಾದ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಕಳೆದ ಐವತ್ತು ವರ್ಷಗಳಿಂದ ಮಾನ್ವಿಯಲ್ಲಿಯೇ ಅದಕ್ಕೆ ವ್ಯವಸ್ಥೆ ಮಾಡಿದ್ದಾರೆ ಎಂದು ರಾಯಚೂರು ಗ್ರಾಮೀಣ ಶಾಸಕ ದದ್ದಲ ಬಸವನಗೌಡ ಹೇಳಿದರು. ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ನಡೆದ ಶ್ರೀ ಕಲ್ಮಠ ದಸರಾ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




"ನಮ್ಮ ನಾಡು ಶರಣರು ನಡೆದಾಡಿದ ಪುಣ್ಯಭೂಮಿಯಾಗಿದೆ. ನಾವು ನೇರವಾಗಿ ದೇವರನ್ನು ಕಾಣಲು ಸಾಧ್ಯವಿಲ್ಲ. ಆದರೆ ಗುರುಗಳ ಮೂಲಕ ದೇವರನ್ನು ಕಾಣಬಹುದು. ಗುರುಗಳ ಮಾರ್ಗದರ್ಶನದಲ್ಲಿ ನಡೆಯುವುದು ನಮ್ಮ ಹಿಂದೂ ಧರ್ಮದ ಸಂಸ್ಕೃತಿಯಾಗಿದೆ. ನಮ್ಮ ಯುವ ಪೀಳಿಗೆಯನ್ನು ಸನ್ಮಾರ್ಗದಲ್ಲಿ ಕರೆದೊಯ್ಯುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ" ಎಂದು ಶಾಸಕರು ತಿಳಿಸಿದರು.

ದಸರಾ ನವರಾತ್ರಿಗಳಲ್ಲಿ ಶ್ರೀದೇವಿ ಪುರಾಣವನ್ನು ಕೇಳುವುದರಿಂದ ನಮ್ಮಲ್ಲಿರುವ ದುಷ್ಟ ಬುದ್ಧಿ ಹೋಗಿ, ಸನ್ಮಾರ್ಗದಲ್ಲಿ ನಡೆಯಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ, ಕಲ್ಮಠದ ಶ್ರೀಗಳು ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸುತ್ತಿದ್ದಾರೆ. ಇದು ಇತರ ಮಹಿಳೆಯರಿಗೆ ಸ್ಫೂರ್ತಿ ತುಂಬುವ ಕೆಲಸ ಎಂದು ಬಸವನಗೌಡ ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಅನ್ನದಾನಸ್ವಾಮಿಗಳು ಶ್ರೀದೇವಿ ಪುರಾಣ ಪ್ರವಚನ ನೀಡಿದರು. ಅಂತರರಾಷ್ಟ್ರೀಯ ಹಾಸ್ಯ ಕಲಾವಿದರಾದ ಕೊಟ್ರೇಶ್ ಕೂಡ್ಲಿಗಿ ಅವರು ಹಾಸ್ಯ ಕಾರ್ಯಕ್ರಮ ನಡೆಸಿಕೊಟ್ಟರು. ಮಹಿಳೆಯರ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಿರುವ ಚೆನ್ನಮ್ಮ ಮುದ್ದಮಗುಂಡಿ ಅವರಿಗೆ 'ರಾಜ್ಯಮಟ್ಟದ ಸುವರ್ಣ ದಸರಾ ಸಾಧಕ ಸೀರಿ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಕಲ್ಮಠದ ಶ್ರೀ ವಿರೂಪಾಕ್ಷಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಬೃಹನ್ಮಠ ನೀಲಗಲ್ ಸಂಸ್ಥಾನ ಮಠದ ಶ್ರೀ ರೇಣುಕಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತ ರಿದ್ದರು.

## ಸಹಕಾರ ಚಳುವಳಿಯಲ್ಲಿ ಯುವಕರ ಪಾಲ್ಗೊಳ್ಳುವಿಕೆ ಇಂದು ಅನಿವಾರ್ಯ : ಬಾಬು ಅಲಿ ಕರಡಿಗುಡ್ಡ

ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.25–** ದೇಶದ ಸಹಕಾರ ಕ್ಷೇತ್ರದಲ್ಲಿ ಯುವ ಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಭವಿಷ್ಯದಲ್ಲಿ ಸಹಕಾರ ಚಳುವಳಿ ಬೆಳೆಯಬೇಕಾದರೆ ಯುವಕರ ಭಾಗವಹಿಸುವಿಕೆ ಅನಿವಾರ್ಯ ಎಂದು ದೇವದುರ್ಗ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಬಾಬು ಅಲಿ ಕರಡಿಗುಡ್ಡ ಅಭಿಪ್ರಾಯಪಟ್ಟಿದ್ದಾರೆ.



ಗುರುವಾರ ನಗರದ ಖೇಣೆದ್ ಮುರಿಗೆಪ್ಪ ಮಹಾವಿದ್ಯಾಲಯದಲ್ಲಿ ನಡೆದ "ಸಹಕಾರ ಮತ್ತು ಯುವಕರು" ಸಂವಾದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ವಿಶೇಷವಾಗಿ ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಸಹಕಾರ ಚಳುವಳಿ ಹಿಂದುಳಿದಿದೆ ಎಂದರು. ಯುವ ಸಮುದಾಯದ ಆಗಮನದಿಂದ ಸಹಕಾರ ಕ್ಷೇತ್ರದಲ್ಲಿ ಹೊಸ ಯೋಜನೆಗಳು ಮತ್ತು ಆಲೋಚನೆಗಳು ಮೂಡಲು ಸಾಧ್ಯ ಎಂದು ಅವರು ಹೇಳಿದರು.

ಈ ಕಾರ್ಯಕ್ರಮವನ್ನು ದೇವದುರ್ಗ ಪುರಸಭೆ ಅಧ್ಯಕ್ಷೆ ಮಲ್ಲಮ್ಮ ಅವರು ಉದ್ಘಾಟಿಸಿದರು. ಕಾರ್ಯಕ್ರಮದ ನಂತರ ನಡೆದ ಸಂವಾದದಲ್ಲಿ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ಚರ್ಚೆಗಳಲ್ಲಿ ಭಾಗಿಯಾದರು.

ಸಮಾರಂಭದಲ್ಲಿ ಹೊರನಾಡು ಅನ್ನಪೂರ್ಣೇಶ್ವರಿ ಸೌಹಾರ್ದ ಸಹಕಾರಿಯ ಅಧ್ಯಕ್ಷರಾದ ವೆಂಕಟರಾಯ ಬೆನಕನ, ಕಾಲೇಜಿನ ಆಡಳಿತಾಧಿಕಾರಿಗಳಾದ ಬಸವರಾಜ್ ಯಟಗಲ್, ಸೌಹಾರ್ದ ಅಭಿವೃದ್ಧಿ ಅಧಿಕಾರಿಗಳಾದ ನಟರಾಜ, ಸಹಕಾರಿಗಳಾದ ಚಂದ್ರು ಮತ್ತು ಸುದರ್ಶನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕುಮಾರಿ ಭಾಗ್ಯಶ್ರೀ ಪ್ರಾರ್ಥನೆ ಸಲ್ಲಿಸಿದರು, ಸೂರ್ಯಕಾಂತ್ ಯಾರ್ಕಲೆ ಪ್ರಾಸ್ತಾವಿಕ ನುಡಿಗಳನ್ನು ಆಡಿದರು, ನಟರಾಜ ಸ್ವಾಗತಿಸಿದರು ಮತ್ತು ಆಂಜನೇಯ ವಂದನಾರ್ಪಣೆ ಮಾಡಿದರು.

## ಜಾಗೀರಪನ್ನೂರಿನಲ್ಲಿ ಮದ್ಯಪಾನ ಮತ್ತು ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25–** ಯುವ ಸಮುದಾಯದಲ್ಲಿ ಹೆಚ್ಚುತ್ತಿರುವ ಮದ್ಯಪಾನ ಮತ್ತು ಮಾದಕ ವ್ಯಸನಗಳ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಮಾನ್ವಿ ತಾಲೂಕಿನ ಜಾಗೀರಪನ್ನೂರು ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರಿನ ಸಂತ ಜೋಸೆಫ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಲೊಯೋಲ ಸಮಾಜಸೇವಾ ಕೇಂದ್ರ ಮಾನ್ವಿ ಮತ್ತು ಜಾಗೀರಪನ್ನೂರು ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಸಲಾಯಿತು.




ಬೆಂಗಳೂರಿನಿಂದ ಆಗಮಿಸಿದ್ದ ವಿದ್ಯಾರ್ಥಿಗಳ ತಂಡವು ಗ್ರಾಮದ ಪರಿಸರ, ರೈತರ ಜೀವನಶೈಲಿ ಮತ್ತು ಕೃಷಿ ಪದ್ಧತಿಗಳ ಬಗ್ಗೆ ಮಾಹಿತಿ ಪಡೆದರು. ಸಂಜೆ ನಡೆದ ಕಾರ್ಯಕ್ರಮದಲ್ಲಿ, ವಿದ್ಯಾರ್ಥಿಗಳು ನೃತ್ಯ ಪ್ರದರ್ಶನಗಳು ಮತ್ತು ನಾಟಕಗಳ ಮೂಲಕ ಜನರನ್ನು ಆಕರ್ಷಿಸಿದರು. ಈ ಮೂಲಕ ಮದ್ಯಪಾನ ಮತ್ತು ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಸಂದೇಶ ನೀಡಿದರು.

ಇದೇ ವೇಳೆ, ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗುಗಳ ವಿರುದ್ಧವೂ ಜಾಗೃತಿ ಮೂಡಿಸಲಾಯಿತು. "ಮಕ್ಕಳು ಆಟವಾಡುವ ವಯಸ್ಸಿನಲ್ಲಿ ಮದುವೆ ಮಾಡಿಸುವುದನ್ನು ನಿಲ್ಲಿಸಿ, ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅವರಿಗೆ ಸಹಾಯ ಮಾಡಿ" ಎಂದು ವಿದ್ಯಾರ್ಥಿಗಳು ನಾಟಕದ ಮೂಲಕ ಸಂದೇಶ ನೀಡಿದರು. ಶಿಕ್ಷಣದ ಮಹತ್ವ, ಮಹಿಳೆಯರ ಆರೋಗ್ಯ ಹಾಗೂ ನೈರ್ಮಲ್ಯಕ್ಕಾಗಿ ಸ್ಯಾನಿಟರಿ ಪ್ಯಾಡ್‌ಗಳ ಬಳಕೆಯ ಬಗ್ಗೆಯೂ ಮಾಹಿತಿ ನೀಡಲಾಯಿತು. ಮದ್ಯಪಾನ ಮತ್ತು ಮಾದಕ ವಸ್ತುಗಳ ವ್ಯಸನದಿಂದ ಯುವಕರು ತಮ್ಮ ಅಮೂಲ್ಯ ಜೀವನ ಹಾಳು ಮಾಡಿಕೊಳ್ಳುತ್ತಿದ್ದು, ಇದರಿಂದ ಅವರ ಕುಟುಂಬವೂ ಸಂಕಷ್ಟಕ್ಕೆ ಸಿಲುಕುತ್ತದೆ ಎಂದು ವಿದ್ಯಾರ್ಥಿಗಳು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂತ ಜೋಸೆಫ್ ಕಾಲೇಜಿನ ಉಪನ್ಯಾಸಕರಾದ ಸನಾ ಖಾನ್, ಶಂಕರ್, ಡೆರಿಕ್, ಹಾಗೂ ಲೊಯೋಲ ಸಮಾಜಸೇವಾ ಕೇಂದ್ರದ ಸಿಬ್ಬಂದಿಯಾದ ರವೀಂದ್ರ ಜಾನೇಕಲ್, ಮರಿಯಪ್ಪ, ವಿಜಯಲಕ್ಷ್ಮೀ, ಅನ್ನಮ್ಮ, ತಿಮಲಮ್ಮ, ಬಸವರಾಜ ಹರವಿ ಮತ್ತು ಪ್ರಕಾಶ ಹುಲುಗುಂಚಿ ಉಪಸ್ಥಿತರಿದ್ದರು.

## ಮೊದಲನೇಯ ಪುಟದಿಂದ

# ಎಸ್ ಟಿ ಸಮುದಾಯಕ್ಕೆ ಪ್ರಬಲ ಜನಾಂಗ ಸೇರ್ಪಡೆ ವಿರೋಧಿಸಿ ಬೃಹತ್ ಪ್ರತಿಭಟನೆ

ಶ್ಯಾಮ ಸುಂದರ ನಾಯಕ , ಅಯ್ಯಪ್ಪ ನಾಯಕ, ಲಕ್ಷ್ಮಿ ದೇವಿ ನಾಯಕರಾಜಾ ರಾಮಚಂದ್ರ ನಾಯಕ, ಅಂಬಣ್ಣ ನಾಯಕ, ಶರಣಬಸವ ನಾಯಕ ಜಾನೇಕಲ್, ಹನುಮೇಶ ನಾಯಕ ,ಮೌನೇಶ ನಾಯಕ, ರಾಮಣ್ಣ ನಾಯಕ, ಕೆ. ವೈ ಬಸವರಾಜ ನಾಯಕ, ವಿರೇಶ ನಾಯಕ ಬೆಟ್ಟದೂರು,ಹನುಮೇಶ ಜೇನೂರು, ರಾಜಾ ಸುಭಾಶ ನಾಯಕ, ಅಯ್ಯಪ್ಪ ನಾಯಕ , ವಿಜಯಕುಮಾರ ನಾಯಕ, ಬಸವನಗೌಡ ಉಟಕನೂರು, ರಮೇಶ ನಾಯಕ , ಕೂಂಡಯ್ಯ ನಾಯಕ, ಅಂಜಿನಯ್ಯ ನೀರಮಾನ್ವಿ, ವೆಂಕಟೇಶ ನಾಯಕ, ಗಂಗಯ್ಯ ನಾಯಕ, ಅಮರೇಶ ನಾಯಕ ಜಾನೇಕಲ್, ಚಂದ್ರು ನಾಯಕ , ಜಿ.ಉಮಾಪತಿ ನಾಯಕ, ಶರಣಪ್ಪ ಮೇದಾ ಅಂಜಿನಯ್ಯ ನಸಲಪೂರು , ಅಂಬಣ್ಣ ನಾಯಕ ಉಮಳಿಹೂಸೂರು ,ನರಸಿಂಹ ನಾಯಕ, ವೆಂಕಟೇಶ ನಾಯಕ, ಮಂಜುನಾಥ ನಾಯಕ ಸೇರಿದಂತೆ ನೂರಾರು ವಾಲ್ಮೀಕಿ ಸಮಾಜದವರು ಇದ್ದರು.

# ಭಕ್ತರ ಸಹಕಾರದಿಂದ ದೇವಾಲಯಗಳ ಅಭಿವೃದ್ಧಿ: ಮಾಜಿ ಸಂಸದ ಬಿ.ವಿ.ನಾಯಕ

ವೆಂಕಟೇಶ ಬಿ.ಚವ್ಹಾಣ್ ವಕೀಲರು, ವಿಶ್ವನಾಥ ಪಾಟೀಲ್ ಆಲ್ಕೋಡ, ಬಸವರಾಜಪ್ಪಗೌಡ ಜಾಡಲದಿನ್ನಿ, ವಿರೇಶಗೌಡ ಬಿ.ಗಣೇಕಲ್, ವೆಂಕೋಬ ನಾಯಕ ಬಿಚ್ಚಲ, ಬಸವರಾಜಗೌಡ ನಾಗೋಲಿ, ಶೇಖರಪ್ಪಗೌಡ ನಾಗೋಲಿ. ಮಾಜಿ ಗ್ರಾಪಂ ಅಧ್ಯಕ್ಷ ಬಸವರಾಜ ನಾಯಕ, ಮೊನಪ್ಪ ಮುಕ್ಕಲಗುಡ್ಡ, ಹನುಮಂತ ಪೇಂಟರ್ ಸೇರಿದಂತೆ ಸರ್ವ ಭಕ್ತರು ಸುತ್ತಲಿನ ಗ್ರಾಮಸ್ಥರು ಇದ್ದರು.

# ಪುರಸಭೆ ಸಾಮಾನ್ಯ ಸಭೆಯಲ್ಲಿ ಸದಸ್ಯರ ಅಸಮಾಧಾನ

ನೀರು ಬಿಡಲಾಗುತ್ತಿರುವುದರಿಂದ ಜನರಿಗೆ ತೀವ್ರ ತೊಂದರೆಯಾಗುತ್ತಿದೆ. 19 ನೇ ವಾರ್ಡಿನ ವ್ಯಾಪ್ತಿಯಲ್ಲಿ ಬರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ವಿದ್ಯುತ್ ಪೂರೈಕೆಯಾಗುವ ವಿದ್ಯುತ್ ಪರಿವರ್ತಕ ಕೆಟ್ಟಿದ್ದು ಜೆಸ್ಕಾಂ ಇಲಾಖೆ ಅಧಿಕಾರಿಗಳು ನೂತನ ವಿದ್ಯುತ್ ಪರಿವರ್ತಕ ಅಳವಡಿಸುವಂತೆ ಕೋರಿದರು. ಮಾನ್ವಿ ಪುರಸಭೆಯನ್ನು ನಗರಸಭೆಗೆ ಮೆಲ್ದಾರ್ಜೆಗೇರಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಿ ಎಂದು ತಿಳಿಸಿದರು.

ಹಿರಿಯ ಸದಸ್ಯರಾದ ಲಿಕ್ಷೀದೇವಿ ನಾಯಕ ಮಾತನಾಡಿ ಪಟ್ಟಣದ ಬಸ್ ನಿಲ್ದಾಣದ ಹತ್ತಿರ ಇರುವ ಪುರಸಭೆಯ 40 ಮಳಿಗೆಗಳಲ್ಲಿ 30 ಮಳಿಗೆಗಳನ್ನು ಬಾಡಿಗೆ ನೀಡುವುದಕ್ಕೆ ಟೆಂಡರೆ ಕರೆಯದೆ ಇರುವುದರಿಂದ ಪುರಸಭೆ ಅದಾಯದಲ್ಲಿ ನಷ್ಟವಾಗುತ್ತಿರುವುದರಿಂದ ಕ್ರಮಕೈಗೊಳ್ಳುವಂತೆ ತಿಳಿಸಿದರು.

ಸದಸ್ಯ ಶೇಖ ಫರೀದ್ ಉಮ್ರಿ ಕಳಪೆ ಕಮಗಾರಿ ನಡೆಸುವ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆಗೆ ಸೇರಿಸಿ ಗುಣಮಟ್ಟದ ಕಾಮಗಾರಿ ನಡೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸದಸ್ಯ ಅಮ್ಜದ್ ಖಾನ್ ಮಾತನಾಡಿ ಪಟ್ಟಣದಲ್ಲಿರುವ ಅನಧಿಕೃತ ಕಟ್ಟಡಗಳ ಮೇಲೆ ಅಗತ್ಯ ಕ್ರಮ ಕೈಗೊಳ್ಳಬೇಕು, ದೇವನ ತೋಟ ಪ್ರದೇಶದ ವ್ಯಾಪ್ತಿಯಲ್ಲಿ ಬರುವ 500 ಕ್ಕೂ ಹೆಚ್ಚು ಮನೆಗಳಿಗೆ ಕಟ್ಟಡ ಪರವಾನಿಗೆ ನೀಡುವುದಕ್ಕೆ ಕ್ರಮ ಕೈಗೊಳ್ಳುವುದರಿಂದ ಪುರಸಭೆಗೆ ಅದಾಯ ಹೆಚ್ಚುತ್ತದೆ. ಎಂದು ತಿಳಿಸಿದರು.

ಪುರಸಭೆ ಸದಸ್ಯರು ತಮ್ಮ ವಾರ್ಡಗಳಲ್ಲಿನ ಸಮಸ್ಯೆಗಳ ಬಗ್ಗೆ ಮಾತನಾಡಿ ಸಭೆಯಲ್ಲಿ ವಿವಿಧ ವಿಷಯಗಳ ಬಗ್ಗೆ ಚರ್ಚೆ ನಡೆಸಿದರು.

ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ ಸದಸ್ಯರು ಹೇಳಿದ ವಿಷಯಗಳ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಬರವಸೆ ನೀಡಿದರು. ಪುರಸಭೆಯ ಪ್ರಭಾರಿ ಅಧ್ಯಕ್ಷರಾದ ಮೀನಾಕ್ಷಿ ರಾಮಕೃಷ್ಣ ಹಾಗೂ ವಿವಿಧ ವಾರ್ಡಗಳ ಸದಸ್ಯರು ಹಾಗೂ ಪುರಸಭೆ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದರು.

# ಮಳೆಗೆ ಬೆಳೆ ನಷ್ಟ ಪರಿಹಾರಕ್ಕೆ ರೈತರು ಒತ್ತಾಯ

**ಯುವ ಮಾರ್ಗ ಸುದ್ದಿ**



**ಲಿಂಗಸುಗೂರು,ಸೆ.25–** ಮಸ್ಕಿ ತಾಲೂಕಿನ ಮಟ್ಟೂರು ಗ್ರಾಮ ಪಂಚಾಯತಗೆ ವ್ಯಾಪ್ತಿಯ ಗ್ರಾಮಗಳ ರೈತರ & ಗ್ರಾಮಗಳು ಅತಿವೃಷ್ಟಿಗೆ ಹಾಳಾದ ಬೆಳೆಗಳಿಗೆ ಪರಿಹಾರ ಒದಗಿಸಬೇಕೆಂದು ಮಟ್ಟೂರು ಪಂಚಾಯತಿ ಗ್ರಾಮಸ್ಥರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಜಿಲ್ಲೆಯಲ್ಲಿ ಸತತವಾಗಿ ಎರಡು ತಿಂಗಳಿಂದ ಸುರಿದ ಧಾರಾಕಾರ ಮಳೆಗೆ ಅಪಾರ ಪ್ರಮಾಣದ ಬೆಳೆ ಹಾನಿ ಹಾಗೂ ಆಸ್ತಿ ಪಾಸ್ತಿಗಳ ಹಾನಿ ಉಂಟಾಗಿದ್ದು ಅದಕ್ಕೆ ಸೂಕ್ತ ಪರಿಹಾರವನ್ನು ನೀಡಬೇಕು.

ಮಸ್ಕಿ ತಾಲೂಕಿನ ಮಟ್ಟೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಏಳು ಗ್ರಾಮಗಳ ಪ್ರಮುಖ ಬೆಳೆಗಳಾದ ತೊಗರಿ, ಹತ್ತಿ, ಸೂರ್ಯಕಾಂತಿ ಸಜ್ಜೆ ಮೆಣಸಿನಕಾಯಿ, ದಾಳಿಂಬೆ ಪ್ರಮುಖ ಬೆಳೆಗಳು ಸುರಿದ ಧಾರಾಕಾರ ಮಳೆಗೆ ಹಾನಿಯಾಗಿದೆ ಅದಕ್ಕೆ ರೈತರಿಗೆ ಸೂಕ್ತವಾಗಿ ಬೆಳೆ ಪರಿಹಾರವನ್ನು ಒದಗಿಸಿ, ಸಮೀಕ್ಷೆಯ ಮೂಲಕ ಬೆಳೆಯಾನಿಯನ್ನು ಪರೀಕ್ಷೆ ಮಾಡಿ ಸಮೀಕ್ಷೆ ಮಾಡಿ ಎಷ್ಟು ವಿಸ್ತೀರ್ಣದಲ್ಲಿ ಬೆಳೆ ಹಾನಿಯಾಗಿದೆ ಎಷ್ಟು ಪ್ರಮಾಣದಲ್ಲಿ ಬೆಳೆಯಾನಿಯಾಗಿದೆ ಎಂದು ತಿಳಿದು ರೈತರಿಗೆ ಬಿತ್ತುವ ಬೀಜರ ಸಗೊಬ್ಬರ ಮುಂತಾದ ವೆಚ್ಚಗಳು ಆಗಿರುವುದರಿಂದ ರೈತನ ಬದುಕನ್ನು ಅರಿತು ಅವರಿಗೆ ಸೂಕ್ತವಾದ ಪರಿಹಾರವನ್ನು ಒದಗಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಈರಣ್ಣ ಗುಡಿಹಾಳ, ಬಸವನಗೌಡ ಮಟ್ಟೂರು, ಶಂಷಾವಲಿ ಗುಡಿಹಾಳ, ಗದ್ದೆಪ್ಪ ಕುಣಿಕೆಲ್ಲೂರು, ಜಹೀರ್ ಪಾಷಾ, ದೇವಪ್ಪ ಗುಡಿಹಾಳ, ಬಸವರಾಜ, ಶೇಖರಪ್ಪ ಸೇರಿದಂತೆ ಇತರರು ಇದ್ದರು.

# 10 ದಿನಗಳ ಕಾಲ ಉದ್ಯಮಶೀಲತಾ ಅಭಿವೃದ್ಧಿಗೆ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.25–** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಆಸಕ್ತ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿಗೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು ರಾಯಚೂರಿನಲ್ಲಿ 2025ರ ಅಕ್ಟೋಬರ್ ಮೊದಲನೇ ವಾರದಲ್ಲಿ ಹಮ್ಮಿಕೊಳ್ಳಲಾಗುವುದು. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ಜಿಲ್ಲೆಯ ಆಸಕ್ತ ಪರಿಶಿಷ್ಟ ಜಾತಿ ಮಹಿಳಾ ಹಾಗೂ ಪುರುಷ ಅಭ್ಯರ್ಥಿಗಳು ಅಕ್ಟೋಬರ್ 03ರೊಳಗಾಗಿ ಅರ್ಜಿ ಸಲ್ಲಿಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9986600631, 9986332736ಗೆ ಅಥವಾ ಸಿಡಾಕ್, ಕಚೇರಿ ನವೀನ ಆಸ್ಪತ್ರೆ ಪಕ್ಕದಲ್ಲಿ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಜಂಟಿ ನಿರ್ದೇಶಕರಾದ ಜಿ.ಯು. ಹುಡೇದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಹಿತ್ಯ ಭೀಷ್ಮನಿಗೆ ಕಂಬನಿ ಧಾರೆ, ಇಂದು ಚಾಮುಂಡಿ ತಪ್ಪಲಿನಲ್ಲಿ ಅಂತ್ಯಕ್ರಿಯೆ





**ಬೆಂಗಳೂರು, ಸೆ.25–**ಕನ್ನಡ ಸಾರಸ್ವತ ಲೋಕದ ದಿಗ್ಗಜ, ಮೇರು ಸಾಹಿತಿ, ಕಾದಂಬರಿ ಕಾರ , ಸರಸ್ವತಿ ಸಮಾನ್ ಪ್ರಶಸ್ತಿ ಪುರಸ್ಕೃತ, ಪದಭೂಷಣ ಡಾ. ಎಸ್.ಎಲ್.ಭೈರಪ್ಪ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಅವರ ಅಪಾರ ಅಭಿಮಾನಿ ಬಳಗ, ಗಣ್ಯರು, ಸಾಹಿತಿಗಳು, ಕಲಾವಿದರು ಕಂಬನಿ ಮಿಡಿದರು.

ನಿನ್ನೆ ನಿಧನರಾದ ಭೈರಪ್ಪನವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಇಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ಅವಕಾಶ ಕಲ್ಪಿಸಲಾಗಿತ್ತು. ರಾಜ್ಯದ ಮೂಲೆ ಮೂಲೆಗಳಿಂದ ಆಗಮಿಸಿದ ಸಾಹಿತ್ಯಾಭಿಮಾನಿಗಳು, ಓದುಗರು, ರಾಜಕೀಯ ಗಣ್ಯರು, ಕಲಾವಿದರು, ಹಿರಿ–ಕಿರುತೆರೆಯ ನಟ–ನಟಿಯರು ಆಗಮಿಸಿ ಅಗಲಿದ ಮೇರು ಸಾಹಿತಿಗೆ ಅಶ್ರುತರ್ಪಣ ಅರ್ಪಿಸಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್.ಅಶ್ವತ್ಥನಾರಾಯಣ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಹಿರಿಯ ನಟಿಯರಾದ ತಾರಾ ಅನುರಾಧ, ಮಾಳವಿಕಾ ಅವಿನಾಶ್, ದೂರದರ್ಶನ, ಆಕಾಶವಾಣಿ ಕಲಾವಿದರು, ಹಿರಿಯ ಪತ್ರಕರ್ತರು ಸೇರಿದಂತೆ ಬೃಹತ್ ಅಭಿಮಾನಿ ಬಳಗವೇ ಅಂತಿಮ ದರ್ಶನ ಪಡೆದು ನಮನ ಸಲ್ಲಿಸಿದರು.

ಭೈರಪ್ಪನವರ ಕಾದಂಬರಿಗಳು, ಸಾಹಿತ್ಯದ ಬಗ್ಗೆ ಗುಣಗಾನ ಮಾಡುತ್ತಾ ಅಭಿಮಾನಿಗಳು ಕಂಬನಿ ಮಿಡಿಯುತ್ತಿದ್ದ ದೃಶ್ಯ ಸಾಮಾನ್ಯವಾಗಿ ಕಂಡುಬಂದಿತು. ಭೈರಪ್ಪನವರು ತಮ ಕಾದಂಬರಿಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ಪರಿಯನ್ನು ತಮದೇ ಆದ ರೀತಿಯಲ್ಲಿ ಓದುಗರು ಬಣ್ಣಿಸಿದರು.ಅವರ ತವರೂರಾದ ಹಾಸನ ಜಿಲ್ಲೆಯ ಸಂತೇಶಿವರ ಗ್ರಾಮದಿಂದಲೂ ಅಪಾರ ಸಂಖ್ಯೆಯ ಅಭಿಮಾನಿಗಳು ಆಗಮಿಸಿದ್ದರು. ಜೊತೆಗೆ ಅವರು ಕಾರ್ಯನಿರ್ವಹಿಸಿದ ಮೈಸೂರು, ದೂರದ ದೆಹಲಿ ಸೇರಿದಂತೆ ವಿವಿಧೆಡೆಯಿಂದ ಸ್ನೇ?ಹಿತರು, ಬಂಧು–ಬಾಂಧವರು ಆಗಮಿಸಿ ಅಗಲಿದ ಚೇತನಕ್ಕೆ ಕಂಬನಿ ಮಿಡಿದರು.

ಇಂದು ಮಧ್ಯಾಹ್ನದವರೆಗೂ ಸಾರ್ವಜನಿಕ ದರ್ಶನಕ್ಕೆ ಅವಕಾಶ ನೀಡಲಾಗಿತ್ತು. ಮಧ್ಯಾಹ್ನ ಮೈಸೂರಿಗೆ ಪಾರ್ಥಿವ ಶರೀರ ಕೊಂಡೊಯ್ಯಲಾಯಿತು. ಅಲ್ಲಿ ಸಂಜೆ ಕಲಾಮಂದಿರದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುತ್ತದೆ.ನಾಳೆ ರಾಜ್ಯ ಸರ್ಕಾರದ ಸಕಲ ಸರ್ಕಾರಿ ಗೌರವಗಳೊಂದಿಗೆ ಹಾಗೂ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಭೈರಪ್ಪನವರ ಅಂತ್ಯಕ್ರಿಯೆ ನೆರವೇರಲಿದೆ.

ಭೈರಪ್ಪ ನಿಧನಕ್ಕೆ ದೇವೇಗೌಡರ ಸಂತಾಪ

ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪನವರ ನಿಧನಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರ

ಸ್ವಾಮಿ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.ಕನ್ನಡ ಸಾಹಿತ್ಯ ಲೋಕದ ಮೇರು ಲೇಖಕ, ಸರಸ್ವತಿ ಸಮಾನ್ ಪುರಸ್ಕೃತರಾದ, ಪದಭೂಷಣ ಡಾ.ಎಸ್.ಎಲ್.ಭೈರಪ್ಪ ಅವರು ನಿಧನರಾದ ಸುದ್ದಿ ತಿಳಿದು ಅತೀವ ದುಃಖವಾಯಿತು ಎಂದು ದೇವೇಗೌಡರು ತಮ ಶೋಕ ಸಂದೇಶದಲ್ಲಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಪ್ರಪಂಚಕ್ಕೆ ಉತ್ಕೃಷ್ಟ ಕಾದಂಬರಿಗಳನ್ನು ನೀಡಿ, ಲಕ್ಷಾಂತರ ಓದುಗರ ಮನಗೆದ್ದಿದ್ದ, ಭೈರಪ್ಪನವರ ಅಗಲಿಕೆ ಕನ್ನಡ ಸಾರಸ್ವತ ಲೋಕಕ್ಕೆ ಭರಿಸಲಾಗದ ನಷ್ಟವಾಗಿದೆ. ಮೃತರ ಆತಕ್ಕೆ ಚಿರಶಾಂತಿ ಸಿಗಲಿ, ಅವರ ಕುಟುಂಬವರ್ಗ ಮತ್ತು ಅಭಿಮಾನಿಗಳ ದು:ಖದಲ್ಲಿ ನಾನೂ ಭಾಗಿಯಾಗಿದ್ದೇನೆ ಎಂದು ದೇವೇಗೌಡರು ಕಂಬನಿ ಮಿಡಿದಿದ್ದಾರೆ.ಪ್ರಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪ ಅವರ ನಿಧನಕ್ಕೆ ತೀವ್ರ ಶೋಕ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಅವರ ಅಗಲಿಕೆಯಿಂದ ಬಹುದೊಡ್ಡ ಶೂನ್ಯ ಸೃಷ್ಟಿಯಾಗಿದೆ ಎಂದು ಕಂಬನಿ ಮಿಡಿದಿದ್ದಾರೆ.

ಪರ್ವ ಮತ್ತು ಉತ್ತರಕಾಂಡ ಕಾದಂಬರಿಗಳ ಮೂಲಕ ಮಹಾಭಾರತ ಹಾಗೂ ರಾಮಾಯಣವನ್ನು ನೋಡುವ ಮತ್ತು ಓದುವ ಕ್ರಮವನ್ನೆ ಬದಲಿಸಿದ ಅಭಿಜಾತ ಕಾದಂಬರಿಕಾರ ಸರಸ್ವತಿ ಸಮಾನ ಪುರಸ್ಕೃತರು, ಪದಭೂಷಣ ಎಸ್.ಎಲ್. ಭೈರಪ್ಪನವರು ನಿಧನರಾದರೆಂಬ ಸುದ್ದಿ ಕೇಳಿ ತೀವ್ರ ಆಘಾತ ಉಂಟಾಯಿತು ಎಂದು ಹೆಚ್‌ಡಿಕೆ ತಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ಭೈರಪ್ಪನವರ ಕಾದಂಬರಿಗಳನ್ನು ನಾನು ನಿಕಟವಾಗಿ ಓದಿದ್ದೇನೆ. ಅವರ ಕಥನ ಶೈಲಿ, ಪಾತ್ರ ಸೃಷ್ಟಿಯ ಪ್ರತಿಭೆಗೆ ಮಾರು ಹೋಗಿದ್ದೇನೆ. ಅವರು ಕನ್ನಡ ನೆಲದಲ್ಲಿ ಹುಟ್ಟಿ ಕನ್ನಡದಲ್ಲೇ ಬರೆದ ಅಪ್ಪಟ ಭಾರತೀಯ ಕಾದಂಬರಿಕಾರರು. ಮೇಲಾಗಿ ಹಾಸನ ಜಿಲ್ಲೆಯಲ್ಲಿ ಹುಟ್ಟಿದ್ದ ಅಮರ ಪ್ರತಿಭೆ ಎಂಬ ಹೆಮೆ ನನ್ನದು. ಅವರ ಅಗಲಿಕೆಯಿಂದ ಬಹುದೊಡ್ಡ ಶೂನ್ಯ ಸೃಷ್ಟಿಯಾಗಿದೆ ಎಂದು ಅವರು ದುಃಖ ವ್ಯಕ್ತಪಡಿಸಿದ್ದಾರೆ.

ಭೈರಪ್ಪನವರ ನಿಧನ ವೈಯಕ್ತಿಕವಾಗಿ ನನಗೆ ಬಹಳ ದುಃಖ ಉಂಟು ಮಾಡಿದೆ. ಅವರ ಆತಕ್ಕೆ ಚಿರಶಾಂತಿ ಸಿಗಲಿ ಹಾಗೂ ಅವರ ಕುಟುಂಬಸ್ಥರು, ಅಭಿಮಾನಿಗಳಿಗೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೆ?ನೆ ಎಂದು ಅವರು ಹೇಳಿದ್ದಾರೆ.

# ಜೀವ ಉಳಿಸುವುದಕ್ಕೆ ರಕ್ತ ಅಗತ್ಯ–ಕೆ.ಅನಂತರಾಜ ನಾಯಕ ಬಿಜೆಪಿ ಯುವ ಮೋರ್ಚಾದಿಂದ ರಕ್ತದಾನ ಶಿಬಿರ



**ಅರಕೇರಾ,ಸೆ.25–** ವಿಶ್ವದ ನಾಯಕ ಪ್ರಧಾನಿ ನರೇಂದ್ರ ಮೋದಿಜೀಗೆ ಯಾರೂ ಸರಿಸಾಟಿ ಇಲ್ಲ. ವಿರೋಧ ಪಕ್ಷದ ನಾಯಕರ ಸುಳ್ಳು ಪ್ರಚಾರದಿಂದ ಅವರಿಗೆ ಏನನ್ನೂ ಸಾಧಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ವಿನಯ್ ಹೇಳಿದರು.

ಪಟ್ಟಣದಲ್ಲಿ ಬಿಜೆಪಿ ಮಂಡಲ ಯುವ ಮೋರ್ಚಾದಿಂದ ಪ್ರಧಾನಿ ನರೇಂದ್ರ ಮೋದಿಜೀ ಅವರ 75ನೇ ಜನ್ಮ ದಿನಾಚರಅಂಗವಾಗಿ ಹಮ್ಮಿಕೊಂಡಿದ್ದ ಸೇವಾ ಪಾಕ್ಷಿಕ ಕಾರ್ಯದ ಭಾಗವಾಗಿ ರಕ್ತದಾನ ಶಿಬಿರ, ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಗುರುವಾರ ಮಾತನಾಡಿದರು.

ಬಿಜೆಪಿಯಲ್ಲಿ ಸಾಮಾನ್ಯ ವ್ಯಕ್ತಿ ದೇಶದ ಪ್ರಧಾನಿಯಾಗಬಹುದು ಎಂಬುದಕ್ಕೆ ಮೋದಿಜೀ ನಿದರ್ಶನ. ಆರ್ಥಿಕ, ಕೃಷಿ ಸೇರಿ ಎಲ್ಲ ಕ್ಷೇತ್ರಗಳಲ್ಲಿ ಭಾರತ ಮುಂಚೂಣಿಯಲ್ಲಿದೆ. ಆಯುಷ್ಮಾನ್, ಜನ್ ಧನ್, ಉಜ್ವಲ್ ಯೋಜನೆಗಳು ಬಡ ವರ್ಗಕ್ಕೆ ಅನುಕೂಲಕರವಾಗಿವೆ. ದೇಶದಲ್ಲಿ ದಿನಕ್ಕೆ 30 ಕಿಮೀ ರಸ್ತೆ, 15 ಕಿ.ಮೀ ರೈಲ್ವೆ ಸಂಪರ್ಕ ಅಭಿವೃದ್ಧಿಯಾಗುತ್ತಿದೆ. ಜಾಗತೀಕ ಮಟ್ಟದಲ್ಲಿ ಭಾರತವನ್ನು ವಿಶ್ವ ಕೊಂಡಾಡುತ್ತಿದೆ ಎಂದರು.

ಆರ್ಟಿಕಲ್ 370 ರದ್ದಾದರೆ, ರಾಮಮಂದಿರ ನಿರ್ಮಾಣವಾದರೆ ದೇಶದಲ್ಲಿ ರಕ್ತಪಾತವಾಗುತ್ತದೆ ಎಂದು ವಿರೋಧ ಪಕ್ಷಗಳು ಬಿಂಬಿಸಿದ್ದವು. ಮೋದಿಜೀ ನೇತೃತ್ವದ ಕೇಂದ್ರ ಸರ್ಕಾರ ಐತಿಹಾಸಿಕ ನಿರ್ಣಯಗಳನ್ನು ಕೈಗೊಂಡಿದ್ದರಿಂದ ಭಾರತೀಯರು ಶಾಂತಿಯುತವಾಗಿ ನೆಲೆಸಲು ಸಾಧ್ಯವಾಗಿದೆ ಎಂದರು.

ನಿವೃತ್ತ ಬ್ಯಾಂಕ್ ಅಧಿಕಾರಿ ಕೆ.ಅನಂತರಾಜ ನಾಯಕ ಮಾತನಾಡಿ, ರಕ್ತದಾನ ಅತ್ಯಂತ ಶ್ರೇಷ್ಠವಾದದ್ದು. ಭಾರತದಲ್ಲಿ ಪ್ರತಿದಿನ ಲಕ್ಷಾಂತರ ಯುನಿಟ್ ರಕ್ತದ ಅಗತ್ಯವಿದೆ. ಆದರೆ, ಅದರರದಲ್ಲಿ ಅರ್ಧದಷ್ಟು ಲಭ್ಯವಾಗುತ್ತಿದೆ. ಅಪಘಾತದಲ್ಲಿ ಗಾಯಗೊಂಡವರಿಗೆ, ಗರ್ಭಿಣಿಯರಿಗೆ, ಮಕ್ಕಳಿಗೆ ತುರ್ತು ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಇರುತ್ತದೆ. ದಾನಿಗಳು ನೀಡುವ ಸ್ವಲ್ಪ ರಕ್ತ ಮತ್ತೊಬ್ಬರ ಜೀವ ಉಳಿಸುವುದಕ್ಕೆ ಸಹಕಾರಿಯಾಗುತ್ತದೆ ಎಂದರು. 150 ಜನ ಬಿಜೆಪಿ ಕಾರ್ಯಕರ್ತರು ರಕ್ತದಾನ ಮಾಡಿದರು. ರಾಯಚೂರಿನ ರೋಟರಿ ಜನಸೇವಾ ಪ್ರತಿಷ್ಠಾನ ರಕ್ತ ಕೇಂದ್ರದ ಟೆಕ್ನಿಷನ್ಸ್ ರಕ್ತ ಸಂಗ್ರಹಿಸಿದರು. ಇದೇ ವೇಳೆ ಬಿಜೆಪಿ ಸಂಸ್ಥಾಪಕ ಪಂಡಿತ್ ದೀನ್ ದಯಾಳ ಉಪಾಧ್ಯಯರ 109ನೇ ಜನ್ಮದಿನಾಚರಣೆಯನ್ನು ಆಚರಿಸಿದರು.

ಮಂಡಲ ಅಧ್ಯಕ್ಷ ಲಕ್ಷ್ಮಣ ರಾಠೋಡ, ಯುವ ಮೋರ್ಚಾ ಅಧ್ಯಕ್ಷ ಕೆ.ಭಗವಂತ್ರಾಯ ನಾಯಕ, ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ರವಿಗೌಡ, ಕಾರ್ತಿಕ ರೆಡ್ಡಿ, ಜಿಪಂ ಮಾಜಿ ಸದಸ್ಯ ಸತ್ಯನಾರಾಯಣ ನಾಯಕ ಪ್ರೋ.ಪಾ, ನಿವೃತ್ತ ಬ್ಯಾಂಕ್ ಅಧಿಕಾರಿ ಕೆ.ಅನಂತರಾಜ ನಾಯಕ, ರಿಮ್ಸ್ ನಾಮನಿರ್ದೇಶಿತ ಮಾಜಿ ಸದಸ್ಯ ಡಾ.ಎಚ್.ಎ ನಾಡಗೌಡ, ಪ್ರಮುಖರಾದ ಸೀತಣ್ಣ ನಾಯಕ, ವೆಂಕಟೇಶ ನಾಯಕ ದೊರೆ, ಶರಣಗೌಡ ಮಾಪಾ ಬಿ.ಗಣೇಕಲ್, ಶರಣಪ್ಪ ನಾಯಕ ಬುದ್ದಿನ್ನಿ, ದುರುಗಣ್ಣ ನಾಯಕ, ಅಯ್ಯನಗೌಡ ಚಡಕಲಗುಡ್ಡ, ಕಿಷ್ಟಪ್ಪ ನಾಯಕ ಇತರರಿದ್ದರು.

## ಗೃಹಜ್ಯೋತಿ ಫಲಾನುಭವಿಗಳ ಸಂಖ್ಯೆ ಕಡಿತಕ್ಕೆ ಗ್ಯಾರಂಟಿ ಸರ್ಕಾರ ಷಡ್ಯಂತ್ರ : ಆರ್.ಆಶೋಕ್ ಆರೋಪ



**ಬೆಂಗಳೂರು,ಸೆ.25–** ಗೃಹಜ್ಯೋತಿ ಫಲಾನುಭವಿಗಳ ಸಂಖ್ಯೆ ಕಡಿತಕ್ಕೆ ಕಾಂಗ್ರೆಸ್ ಸರ್ಕಾರದ ಷಡ್ಯಂತ್ರ ನಡೆಸಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಆಶೋಕ್ ಅರೋಪಿಸಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಲಕ್ಷಾಂತರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವ ಮೂಲಕ ಬಡವರ ಅನ್ನಭಾಗ್ಯಕ್ಕೆ ಕತ್ತರಿ ಹಾಕುತ್ತಿರುವ ಕಾಂಗ್ರೆಸ್ ಸರ್ಕಾರ ಈಗ 30 ದಿನಗಳ ಬದಲಾಗಿ, 40 ದಿನಗಳಿಗೆ ವಿದ್ಯುತ್ ಮೀಟರ್ ರೀಡಿಂಗ್ ತೆಗೆದುಕೊಳ್ಳುವ ಮೂಲಕ ಫಲಾನುಭವಿಗಳ ವಿದ್ಯುತ್ ಬಳಕೆಯ ಸರಾಸರಿ ಮಿತಿ ಏರಿಸಿ, ಗೃಹಿಜ್ಯೋತಿ ಯೋಜನೆಯಿಂದ ಅನರ್ಹಗೊಳಿಸುವ ಹುನ್ನಾರ ಮಾಡುತ್ತಿದೆ ಎಂದು ಕಿಡಿಕಾರಿದ್ದಾರೆ.

## ವಿವೇಕಾನಂದ ವಿದ್ಯಾ ನಿಕೇತನ ವಿದ್ಯಾರ್ಥಿಗಳು ರಾಜ್ಯ ಮಟ್ಟಕ್ಕೆ ಆಯ್ಕೆ



**ಕಲಬುರಗಿ,ಸೆ.25–**ಶಾಲಾ ಶಿಕ್ಷಣ ಇಲಾಖೆಯು ಆಯೋಜಿಸಿದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ವಿವೇಕಾನಂದ ವಿದ್ಯಾ ನಿಕೇತನ ಶಾಲೆಯ ಮಕ್ಕಳು ಉತ್ತಮ ಸಾಧನೆ ಮಾಡಿ, ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ಈಜು ಸ್ಪರ್ಧೆಯ 50, 100, 200 ಮೀಟರ್ ಬ್ರೆಸ್ಟ್ರೋಕದಲ್ಲಿ ಸಮರ್ಥ ರವಿಕುಮಾರ ಹೆಬ್ಬಾರೆಪ್ರಥಮ ಸ್ಥಾನ, 50, 100, 400ಮೀ ಫ್ರೀಸ್ಟೈಲ್ ಸ್ಪರ್ಧೆಯಲ್ಲಿ ಸುಮಿತ ಶರಣಬಸಪ್ಪ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಯೋಗ ಸ್ಪರ್ಧೆಯಲ್ಲಿ 6ನೇ ತರಗತಿಯ ವಿದ್ಯಾರ್ಥಿನಿ ಪ್ರತಿಕ್ಷಾವಿವೇಕಾನಂದ ಪ್ರಥಮ ಸ್ಥಾನ ಪಡೆದು, ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಮಕ್ಕಳ ಈ ಸಾಧನೆಗೆ ಶಾಲೆಯ ಪ್ರಾಂಶುಪಾಲ ಸಿದ್ದಪ್ಪ ಭಗವತಿ,ದೈಹಿಕ ಶಿಕ್ಷಕರಾದ ಶ್ರೀಲತಾ ನಾಯಕ,ಬಸವರಾಜ ಮಜ್ಜಗೆ,ಶಿಕ್ಷಕರು ಹಾಗೂ ಪೋಷಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ವಾಲ್ಮೀಕಿ ಜಯಂತಿ ವಿಜೃಂಭಣೆಯ ಆಚರಣೆಗೆ ನಿರ್ಣಯ




**ಸಿರುಗುಪ್ಪ, ಸೆ.25–** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಕ್ಟೋಬರ್ 7ರಂದು ನಡೆಯಲಿದ್ದು, ಈ ವರ್ಷ ಕೂಡ ಮೆರವಣಿಗೆ ವಿಜೃಂಭಣೆಯಿಂದ ಆಚರಣೆ ಮಾಡಲಾಗುವುದು ಎಂದು ತಹಶೀಲ್ದಾರ್ ಗೌಸಿಯ ಬೇಗಂ ಸಭೆಯಲ್ಲಿ ನಿರ್ಣಯಿಸಿದರು.

ನಗರದ ಸಿಡಿಪಿಓ ಸಭಾಂಗಣದಲ್ಲಿ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಾಲ್ಲೂಕು ಮೈದಾನದಿಂದ ವೇದಿಕೆ ಕಾರ್ಯಕ್ರಮವರೆಗೆ ಪೂರ್ಣ ಕುಂಭದೊಂದಿಗೆ ಮೆರವಣಿಗೆ ಮಾಡಲಾಗುತ್ತದೆ. ಶೈಕ್ಷಣಿಕವಾಗಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡುವುದು.

ವಾಲ್ಮೀಕಿ ಕುರಿತು ಸಂಪನ್ಮೂಲ ವ್ಯಕ್ತಿಯಿಂದ ವಿಶೇಷ ಉಪನ್ಯಾಸ ನೀಡುವುದು.

ಸಮಯ ಪಾಲನೆ ಇಲ್ಲ, ಅಧಿಕಾರಿಗಳು ಸಭೆಗೆ ಗೈರುಹಾಜರಿಯಲ್ಲಿರುವುದನ್ನು ಸಮುದಾಯದ ಮುಖಂಡರು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಅಧ್ಯಕ್ಷರು ಹಾಗೂ ತಹಶೀಲ್ದಾರ ಅವರನ್ನು ತರಾಟೆಗೆ ತೆಗೆದುಕೊಂಡು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಯೊಂದು ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಶ್ರೀ ವಾಲ್ಮೀಕಿ ಭಾವಚಿತ್ರ ಇಟ್ಟು ಜಯಂತಿ ಆಚರಿಸಬೇಕೆಂದು ಒತ್ತಾಯಿಸಿದರು.

ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಘವೇಂದ್ರ ವರ್ಮ ಕಾರ್ಯಕ್ರಮದ ಎಲ್ಲಾ ರೂಪುರೇಷೆಗಳ ಬಗ್ಗೆ ಮಾಹಿತಿಯನ್ನು ಪಡೆದರು.

ನಗರದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ನೂತನ ಭಾವಚಿತ್ರ ಹಾಕುವುದು. ಅಲ್ಲಿ ಬೀಸಾಡುವ ಕಸದ ನಿಯಂತ್ರಿಸುವಂತೆ ನಗರಸಭೆಗೆ ಆಗ್ರಹಿಸಿದರು. ಸಂಬಂದಿಸಿದ ನಗರಸಭೆ ಅಧಿಕಾರಿಗಳೊಂದಿಗೆ ಚರ್ಚಿಸಿ ಅಸ್ತವ್ಯಸ್ತವಾಗದಂತೆ ಸೂಕ್ತ ವ್ಯವಸ್ಥೆ ಮಾಡಲಾಗುವುದೆಂದು ತಿಳಿಸಿದರು.

# ವೈದ್ಯ ಸೀಟು ಕಬಳಿಕೆ ಯತ್ನ



**ಬೆಂಗಳೂರು,ಸೆ.25–** ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (ಕೆಇಎ) ನಕಲಿ ವೈದ್ಯಕೀಯ ದಾಖಲೆಗಳನ್ನು ಸಲ್ಲಿಸಿ, ಅಂಗವಿಕಲ ಕೋಟಾದ ಮೀಸಲಾತಿ ಅಡಿ ಸರ್ಕಾರಿ ವೈದ್ಯಕೀಯ ಸೀಟು ಪಡೆಯಲು 21 ವಿದ್ಯಾರ್ಥಿಗಳಿಗೆ ನಕಲಿ ಪ್ರಮಾಣಪತ್ರಗಳನ್ನು ಸೃಷ್ಟಿಸಿದ ಇಬ್ಬರು ಸರ್ಕಾರಿ ವೈದ್ಯರು ಸೇರಿ ಐವರನ್ನು ಮಲ್ಲೇಶ್ವರಂ ಪೊಲೀಸರು ಬಂಧಿಸಿದ್ದಾರೆ.

ಬಂಧಿತರಲ್ಲಿ ಇಬ್ಬರು ಸರ್ಕಾರಿ ವೈದ್ಯರು, ಇಬ್ಬರು ಶಿಕ್ಷಕರು ಮತ್ತು ಪ್ರಥಮ ದರ್ಜೆ ಸಹಾಯಕ (ಎಫ್‌ಡಿಎ) ಸೇರಿದ್ದಾರೆ.

ನಂದಿನಿ ಲೇಔಟ್‌ನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಭರ್ಮಪ್ಪ ಕೆಬಿ (50), ವಿಜಯನಗರ ಜಿಲ್ಲೆಯ ಹೊಸಪೇಟೆಯ ಸರ್ಕಾರಿ ಶಾಲೆಯಲ್ಲಿ ಕೆಲಸ ಮಾಡುತ್ತಿರುವ ಕೊಪ್ಪಳ ಮೂಲದ ಡಿಜೆ ಸುಧಾಕರ್, ಹೊಸಪೇಟೆಯ ಎಫ್‌ಡಿಎ ಉಮೇಶ್ ನಾಗಪ್ಪ ಚೌಧರಿ, ಆಡಳಿತ ವೈದ್ಯಾಧಿಕಾರಿ (ಎಎಂಒ) ಡಾ. ಹರಿಪ್ರಸಾದ್ ಮತ್ತು ಹೊಸಪೇಟೆಯ ಸರ್ಕಾರಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವ ಮಕ್ಕಳ ತಜ್ಞ ಡಾ. ಶ್ರೀನಿವಾಸ್ ಬಂಧಿತ ಆರೋಪಿಗಳಾಗಿದ್ದಾರೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವ್ಯತ್ಯಾಸಗಳನ್ನು ಗಮನಿಸಿದ ನಂತರ ನಕಲಿ ಪ್ರಮಾಣಪತ್ರ ದಂಧೆ ಬೆಳಕಿಗೆ ಬಂದಿದೆ ಎಂದು ಪೊಲೀಸರು ಹೇಳಿದ್ದಾರೆ.ಆರೋಪಿಗಳು ಪ್ರಮಾಣಪತ್ರಗಳನ್ನು ನೀಡಲು ಅವರು ಪ್ರತಿ ಅಭ್ಯರ್ಥಿಗೆ 5–10 ಲಕ್ಷ ರೂ. ಶುಲ್ಕ ವಿಧಿಸಿದ್ದಾರೆಂದು ತಿಳಿದುಬಂದಿದೆ.

ಅಭ್ಯರ್ಥಿಗಳು ವೈದ್ಯಕೀಯ ಸೀಟುಗಳಿಗೆ ಅರ್ಜಿ ಸಲ್ಲಿಸುವಾಗ ಅಂಗವಿಕಲ ಕೋಟಾ ಆಯ್ಕೆ ಮಾಡದಿದ್ದರೂ, ಆನ್‌ಲೈನ್ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಶ್ರವಣದೋಷವಿದೆ ಎಂದು ಹೇಳಿಕೊಂಡು ಅರ್ಜಿ ಸಲ್ಲಿಸಿದ್ದಾರೆ.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಕೆಇಎ ನಿಯಮಗಳಂತೆ ಜುಲೈ 17 ರಂದು ವಿಕ್ಟೋರಿಯಾ ಆಸ್ಪತ್ರೆ ಮತ್ತು ನಿಮ್ಹಾನ್ಸ್‌ಗೆ ಆಡಿಯೋಗ್ರಾಮ್ ಮತ್ತು ಬೆರಾ (ಬ್ರೈನ್‌ಸ್ಟೆಮ್ ಆಡಿಟರಿ ಎವೋಕ್ಡ್ ರೆಸ್ಪಾನ್ಸ್) ಪರೀಕ್ಷೆಗೆ ಒಳಪಡಿಸಲು ಕಳುಹಿಸಲಾಯಿತು.

ಈ ವೇಳೆ ವೈದ್ಯರು ಅಭ್ಯರ್ಥಿಗಳು ಸಲ್ಲಿಸಿದ ಆಡಿಯೋಲಾಜಿಕಲ್ ಮೌಲ್ಯಮಾಪನ ವರದಿಗಳು ಅಧಿಕೃತವಲ್ಲ ಎಂಬುದನ್ನು ದೃಢಪಡಿಸಿದ್ದಾರೆ. ಇದರ ನಂತರ, 21 ಅಭ್ಯರ್ಥಿಗಳಿಗೆ ದಾಖಲೆಗಳನ್ನು ಸಲ್ಲಿಸಲು ನೋಟಿಸ್ ಜಾರಿ ಮಾಡಲಾಗಿದೆ.

ನೋಟಿಸ್ ಬೆನ್ನಲೇ ಮೂವರು ವಿದ್ಯಾರ್ಥಿಗಳ ಪೋಷಕರು ವಿಚಾರಣೆಗೆ ಹಾಜರಾಗಿದ್ದು, ನಕಲಿ ಪ್ರಮಾಣಪತ್ರ ಕುರಿತು ಮಾಹಿತಿ ನೀಡಿದ್ದಾರೆ.ಚಿತ್ರದುರ್ಗದ ಮೂಲದವನಾದ ಈತ ಸುಧಾಕರ್ ಮತ್ತು ಉಮೇಶ್ ಜೊತೆ ಸಂಪರ್ಕ ಹೊಂದಿದ್ದ, ಒಟ್ಟಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಕಮಿಷನ್ ಆಧಾರದ ಮೇಲೆ, ನಕಲಿ ಪ್ರಮಾಣಪತ್ರಗಳಿಗಾಗಿ ವೈದ್ಯರ ಸಹಿಯನ್ನು ಪಡೆಯುತ್ತಿದ್ದ.

ಭರ್ಮಪ್ಪ ಇತರ ಶಿಕ್ಷಕರ ಮಕ್ಕಳಿಗೆ ನೀಟ್ ಸೀಟುಗಳನ್ನು ಕೊಡಿಸುವುದಾಗಿ ಭರವಸೆ ನೀಡಿದ್ದಾನೆ. ಇದೇ ರೀತಿಯ ಸಂಪರ್ಕಗಳ ಮೂಲಕ ಇತರ ಪೋಷಕರನ್ನು ಸಂಪರ್ಕಿಸಿ, ವೈದ್ಯಕೀಯ ಸೀಟುಗಳನ್ನು ಕೊಡಿಸುವುದಾಗಿ ಭರವಸೆ ನೀಡಿದ್ದಾನೆ. ಇದರಂತೆ ನಕಲಿ ಪ್ರಮಾಣಪತ್ರ ನೀಡಲು ಅಭ್ಯರ್ಥಿಗಳಿಗೆ 5–10 ಲಕ್ಷ ರೂ.ಗಳಿಗೆ ಬೇಡಿಕೆ ಇಟ್ಟಿದ್ದಾರೆ. ನಂತರ 2–5 ಲಕ್ಷ ರೂ.ಗಳವರೆಗೆ ಮುಂಗಡ ಹಣವನ್ನು ಸಂಗ್ರಹಿಸಿದ್ದಾರೆಂದು ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.ಪ್ರಕರಣದಲ್ಲಿ ಸರ್ಕಾರಿ ವೈದ್ಯರು ಸೇರಿದಂತೆ ಐವರು ಭಾಗಿಯಾಗಿದ್ದಾರೆ. ಇವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಆದರೆ, ವಿದ್ಯಾರ್ಥಿಗಳ ವೃತ್ತಿಜೀವನದ ಮೇಲೆ ಪರಿಣಾಮ ಬೀರುವುದರಿಂದ ಅವರ ವಿರುದ್ಧ ಕ್ರಮ ಕೈಗೊಳ್ಳುವ ಸಾಧ್ಯತೆ ಕಡಿಮೆಯಿದೆ ಎಂದು ತಿಳಿಸಿದ್ದಾರೆ

# ರಸ್ತೆಗುಂಡಿ ಮುಚ್ಚಲು ಬಿವೈವಿ ಆಗ್ರಹ



**ಬೆಂಗಳೂರು, ಸೆ. 25–** ಬೆಂಗಳೂರಿನ ಘನತೆ, ಗೌರವವನ್ನು ಕಾಪಾಡಲು ರಾಜ್ಯ ಸರ್ಕಾರ ಮೊದಲು ಬೆಂಗಳೂರಿನ ರಸ್ತೆಗುಂಡಿಗಳನ್ನು ಮುಚ್ಚುವ ಕೆಲಸ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಹಳೇ ಕಥೆ ಹೇಳುವುದನ್ನು ಬಿಟ್ಟು, ರಾಜ್ಯದ ಅಭಿವೃದ್ಧಿ ಕಡೆ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ನಗರ, ಪಟ್ಟಣಗಳ ರಸ್ತೆಗಳು ಹಾಳಾಗಿ ಗುಂಡಿ ಬಿದ್ದಿವೆ. ಇಷ್ಟಾದರೂ ರಾಜ್ಯ ಸರ್ಕಾರ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡಿಲ್ಲ ಎಂದು ದೂರಿದರು.

ಹಲವಾರು ಬಾರಿ ಡೆಡ್‌ಲೈನ್ ಕೊಟ್ಟರೂ ಇವತ್ತಿಗೂ ಗುಂಡಿ ಮುಚ್ಚಿಸಲು ಸರ್ಕಾರದಿಂದ ಸಾಧ್ಯವಾಗಿಲ್ಲ ಎಂದು ವಿಜಯೇಂದ್ರ ಟೀಕಿಸಿದರು.

ರಸ್ತೆ ಅವ್ಯವಸ್ಥೆಯನ್ನು ಪ್ರತಿಭಟಿಸಿ ಬಿಜೆಪಿ ನಿನ್ನೆ ರಾಜ್ಯಾದ್ಯಂತ 1 ಗಂಟೆ ರಸ್ತೆತಡೆ ಚಳವಳಿ ನಡೆಸಿ ಕೆಲ ಗುಂಡಿಗಳನ್ನು ಮುಚ್ಚಿ ರಾಜ್ಯ ಸರ್ಕಾರಕ್ಕೆ ವಾಸ್ತವ ಪರಿಸ್ತಿತಿ ತಿಳಿಸುವ ಪ್ರಯತ್ನ ಮಾಡಿದೆ. ಈಗಲಾದರೂ ರಾಜ್ಯ ಸರ್ಕಾರ ಎಚ್ಚೆತ್ತು ಪುಕ್ಸಟ್ಟೆ ಭಾಷಣ ಮಾಡುವುದನ್ನು ಬಿಟ್ಟು ಅಭಿವೃದ್ಧಿಯತ್ತ ಗಮನ ಹರಿಸಲಿ ಎಂದು ಒತ್ತಾಯಿಸಿದರು.

ರಸ್ತೆಗುಂಡಿಗಳಿಂದ ಬೆಂಗಳೂರಿನ ಗೌರವ, ಮರ್ಯಾದೆ ಹಾಳಾಗುತ್ತಿದೆ. ಇದನ್ನು ಉಳಿಸುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬೇಕು ಎಂದರು.

ರಾಜ್ಯ ಸರ್ಕಾರದಲ್ಲಿ ಗೊಂದಲಗಳಾದಾಗ ಅಭಿವೃದ್ಧಿ ಕೆಲಸಗಳು ಆಗಿಲ್ಲ ಎಂದು ಜನರಿಗೆ ಮನವರಿಕೆಯಾದಾಗ ಕಾಂಗ್ರೆಸ್ ಮೊದಲಿನಿಂದಲೂ ಜನರ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಮಾಡುತ್ತಲೇ ಇದೆ. ಅಂತಹುದೇ ಪ್ರಯತ್ನ ಈಗ ಜಾತಿ ಗಣತಿಯಿಂದ ಆಗುತ್ತಿದೆ. ಜಾತಿ ಗಣತಿಯಿಂದ ಗೊಂದಲಗಳನ್ನು ಸೃಷ್ಠಿ ಮಾಡಲಾಗುತ್ತಿದೆ ಎಂದು ಅವರು ದೂರಿದರು.

ಜಾತಿ ವಿಷ ಬೀಜ ಬಿತ್ತಿ ಹಿಂದೂ ಸಮಾಜವನ್ನು ಒಡೆಯುವ ಕೆಲಸಕ್ಕೆ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ. ಗೊಂದಲ ಸೃಷ್ಠಿಸುವುದನ್ನು ಬಿಟ್ಟರೆ ರಾಜ್ಯ ಸರ್ಕಾರ ಅಭಿವೃದ್ಧಿ ಮಾಡುತ್ತಿಲ್ಲ ಎಂದು ಟೀಕಿಸಿದರು.

ಈ ಹಿಂದಿನ ಕಾಂತರಾಜು ವರದಿ ಕಸದ ಬುಟ್ಟಿಗೆ ಹೋಯಿತು. ಆಗ 150 ಕೋಟಿ ರೂ. ಖರ್ಚು ಮಾಡಲಾಗಿತ್ತು. ಈಗ ಮತ್ತೆ 400, 500 ಕೋಟಿ ಖರ್ಚು ಮಾಡಿ ರಾಜ್ಯದಲ್ಲಿ ಗೊಂದಲ ಸೃಷ್ಠಿ ಮಾಡಿದ್ದಾರೆ ಎಂದರು.

ನ್ಯಾ, ನಾಗಮೋಹನ್‌ದಾಸ್ ವರದಿ ವಿಚಾರದಲ್ಲೂ ಸರ್ಕಾರ ಇದೇ ರೀತಿ ನಡೆದುಕೊಂಡಿದೆ ಎಂದು ಅವರು ಹೇಳಿದರು.

# ಮೈಸೂರಿನಲ್ಲಿ ಬೈರಪ್ಪನವರ ಸ್ಮಾರಕ ನಿರ್ಮಾಣ : ಸಿಎಂ ಘೋಷಣೆ



**ಬೆಂಗಳೂರು, ಸೆ.25–** ಸಾಹಿತಿ ಎಸ್.ಎಲ್. ಭೈರಪ್ಪ ಅವರ ಸ್ಮಾರಕವನ್ನು ಮೈಸೂರಿನಲ್ಲಿ ನಿರ್ಮಿಸಲಾಗು ವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೆ?ತ್ರದಲ್ಲಿ ಭೈರಪ್ಪ ಅವರ ಅಂತಿಮ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇರು ಸಾಹಿತಿಯ ನಿಧನದಿಂದ ಸಾರಸ್ವತ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಶೋಕಿಸಿದರು.

ಭೈರಪ್ಪ 25ಕ್ಕೂ ಹೆಚ್ಚು ಕಾದಂಬರಿಗಳನ್ನು ಬರೆದಿದ್ದಾರೆ. ಇವರ ಸಾಹಿತ್ಯ 40 ಭಾಷೆಗಳಿಗೆ ಭಾಷಾಂತರಗೊಂಡಿವೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಬೇರೆ ಸಾಹಿತಿಗಳ ಪುಸ್ತಕಗಳು ತುರ್ಜುಮೆಗೊಂಡಿರುವ ಉದಾಹರಣೆಗಳಿಲ್ಲ ಎಂದರು.

ಪ್ರೌಢಶಾಲೆಯಿಂದ ಸ್ನಾತಕೋತ್ತರವರೆಗೂ ಮೈಸೂರಿನಲ್ಲೆ ವಿದ್ಯಾಭ್ಯಾಸ ಮಾಡಿದ್ದರು. ಕಷ್ಟಪಟ್ಟು ಮೇಲೆ ಬಂದವರು. ತತ್ವಶಾಸ್ತ್ರ ಪ್ರಾಧ್ಯಾಪಕರಾಗಿದ್ದರು. ಚಿಕ್ಕ ವಯಸ್ಸಿನಲ್ಲೆ ಸಾಹಿತ್ಯ ರಚನೆಯಲ್ಲಿ ತೊಡಗಿಸಿಕೊಂಡಿದ್ದರು. ಬೋಧನೆ ಹಾಗೂ ಬರೆವಣಿಗೆ ಎರಡನ್ನೂ ಏಕಕಾಲಕ್ಕೆ ನಿರ್ವಹಿಸುವಲ್ಲಿ ಯಶಸ್ವಿಯಾಗಿದ್ದರು ಎಂದು ಹೇಳಿದರು.

ಪದಶ್ರೀ, ಸರಸ್ವತಿ ಸನಾನ್, ನಾಡೋಜ, ರಾಜ್ಯೋತ್ಸವ, ಪಂಪಾ ಸೇರಿದಂತೆ ಅನೇಕ ಪ್ರಶಸ್ತಿಗಳು ಅವರಿಗೆ ಲಭಿಸಿದ್ದವು. ಎಲ್ಲದಕ್ಕೂ ಅವರು ಅರ್ಹರಿದ್ದರು. ಜ್ಞಾನಪೀಠ ಪ್ರಶಸ್ತಿ ಸಿಗಲಿಲ್ಲ ಎಂಬ ನೋವು ಉಳಿದಿತ್ತು, ನನ್ನ ಪ್ರಕಾರ ಅವರಿಗೆ ಜ್ಞಾನಪೀಠ ಸಿಗಬೇಕಿತ್ತು ಎಂದರು.

ಭೈರಪ್ಪ ಹಾಗೂ ನನ್ನ ವಿಚಾರಗಳ ನಡುವೆ ವ್ಯತ್ಯಾಸವಿದ್ದರೂ ಸ್ನೇಹಕ್ಕೆ ಕುಂದಾಗಿರಲಿಲ್ಲ. ಸಾಹಿತ್ಯ ಹಾಗೂ ದೃಷ್ಟಿಕೋನಗಳು ಬೇರೆ ಬೇರೆಯಾಗಿರಬಹುದು, ಒಂದೇ ಆಗಿರಬೇಕೆಂಬ ನಿಯಮಗಳೂ ಇಲ್ಲ. ಅಭಿಪ್ರಾಯ ಬೇರೆ ಇದೆ ಎಂಬ ಕಾರಣಕ್ಕೆ ಅಭಿಮಾನಿಯಾಗಿರಬಾರದು ಎಂದೇನಿಲ್ಲ ಎಂದರು.

ಸಚಿವರಾದ ಮಧುಬಂಗಾರಪ್ಪ, ಶಿವರಾಜ ತಂಗಡಗಿ ಶಾಸಕರಾದ ರಾಘವೇಂದ್ರ ಹಿಟ್ನಾಳ್, ಅಲ್ಲಮಪ್ರಭು ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.ಇದೇ ಸಂದರ್ಭದಲ್ಲಿ ಭೈರಪ್ಪ ಅವರ ಕುಟುಂಬದ ಸದಸ್ಯರನ್ನು ಸಿದ್ದರಾಮಯ್ಯ ಭೇಟಿ ಮಾಡಿ, ಸಾಂತ್ವಾನ ಹೇಳಿದರು.

## ರಸ್ತೆಗುಂಡಿ ಬಿಜೆಪಿ ದುರಾಡಳಿತದ ಫಲ



**ಬೆಂಗಳೂರು, ಸೆ.25–** "ಬೆಂಗಳೂರಿನ ರಸ್ತೆ ಗುಂಡಿಗಳು ಬಿಜೆಪಿ ಸರಕಾರದ ದುರಾಡಳಿತದ ಫಲ. ರಸ್ತೆಗುಂಡಿಗಳನ್ನು ಮುಚ್ಚಲು ನಾವು ಬದ್ಧರಾಗಿದ್ದು, ಇದಕ್ಕಾಗಿಯೇ ಮುಖ್ಯಮಂತ್ರಿಗಳು 750 ಕೋಟಿ ರೂ. ಅನುದಾನ ನೀಡಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ರವೀಂದ್ರ ಕಲಾಕ್ಷೇತ್ರ ಆವರಣದಲ್ಲಿ ಖ್ಯಾತ ಸಾಹಿತಿ ಎಸ್ ಎಲ್ ಬೈರಪ್ಪನವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದ ನಂತರ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯಿಸಿದರು.

ನಗರದಲ್ಲಿ ರಸ್ತೆಗುಂಡಿ ವಿಚಾರವಾಗಿ ಬಿಜೆಪಿ ಪ್ರತಿಭಟನೆ ಬಗ್ಗೆ ಕೇಳಿದಾಗ, "ನಗರದಲ್ಲಿ ರಸ್ತೆಗುಂಡಿಗಳಿರುವುದು ನಿಜ. ಅವುಗಳನ್ನು ಮುಚ್ಚಲು ನಾವು ಕಾರ್ಯಪ್ರವೃತ್ತರಾಗಿದ್ದೇವೆ. ಎಲ್ಲೆಲ್ಲಿ ರಸ್ತೆಗುಂಡಿಗಳಿವೆ ಎಂದು ಮಾಹಿತಿ ನೀಡಿ ಎಂದು ಸಾರ್ವಜನಿಕರು, ಪೊಲೀಸರಿಗೆ ನಾನೇ ಮನವಿ ಮಾಡಿದ್ದೇನೆ. ಬಿಜೆಪಿ ಸರ್ಕಾರ ದುರಾಡಳಿತದ ಪರಿಣಾಮವಾಗಿ ಈ ಪರಿಸ್ಥಿತಿ ಬಂದಿದೆ.

ನಾವು ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ. ಬೆಂಗಳೂರಿನ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಯಾವುದೇ ಅನುದಾನ ಕೊಟ್ಟಿಲ್ಲ ಎಂಬುದನ್ನು ಪ್ರತಿಭಟನೆ ಮಾಡುತ್ತಿರುವ ಬಿಜೆಪಿಗರು ಅರ್ಥಮಾಡಿಕೊಳ್ಳಬೇಕು. ನಾವು ಕೇಂದ್ರಕ್ಕೆ ಹೆಚ್ಚಿನ ತೆರಿಗೆ ಪಾವತಿ ಮಾಡುತ್ತಿದ್ದರೂ ಅವರು ಅನುದಾನ ನೀಡಿಲ್ಲ. ಬೊಮ್ಮಾಯಿ ಅವರ ಸರ್ಕಾರದ ಅವಧಿಯಲ್ಲೂ ಕೇಂದ್ರ ಸರ್ಕಾರದಿಂದ ಬೆಂಗಳೂರಿಗೆ ಸೂಕ್ತ ಅನುದಾನ ಸಿಕ್ಕಿಲ್ಲ. ಆದರೂ ನಾವು ಬೆಂಗಳೂರಿನ ಹಿತ ಕಾಪಾಡುತ್ತೇವೆ. ಬಿಜೆಪಿಗರು ಪ್ರತಿಭಟನೆ ಮಾಡಲಿ, ನಮ್ಮ ಕಾರ್ಯಕರ್ತರು ಬಿಜೆಪಿ ಆಡಳಿತದಲ್ಲಿರುವ ಹುಬ್ಬಳ್ಳಿ–ಧಾರವಾಡ ಸೇರಿದಂತೆ ಇತರೆ ಪಾಲಿಕೆಗಳಲ್ಲಿರುವ ರಸ್ತೆಗುಂಡಿ ಸಮಸ್ಯೆ ಬಗ್ಗೆ ಪ್ರತಿಭಟಿಸಲಿದ್ದಾರೆ" ಎಂದು ತಿಳಿಸಿದರು.

ಉದ್ಯಮಿಗಳ ಜೊತೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ನಮ್ಮ ಸ್ನೇಹಿತರಾದ ಅವರುಗಳು ಕೂಡ ತಮ್ಮ ಜವಾಬ್ದಾರಿ ಯನ್ನು ಅರಿತುಕೊಳ್ಳಬೇಕು" ಎಂದು ತಿಳಿಸಿದರು.

## ಪೌರ ಕಾರ್ಮಿಕರ ಸೇವೆ ಅಪ್ರತಿಮ:ಸಚಿವ ಈಶ್ವರ ಬಿ.ಖಂಡ್ರೆ




**ಬೀದರ, ಸೆ.25–** ಸಮಾಜದ ಸ್ವಚ್ಛತೆ, ಆರೋಗ್ಯ ಹಾಗೂ ಸುಂದರತೆಯ ಹಿತದೃಷ್ಟಿಯಿಂದ ಪ್ರತಿದಿನ ದುಡಿಯುತ್ತಿರುವ ಪೌರ ಕಾರ್ಮಿಕರ ಸೇವೆ ಅಪ್ರತಿಮ ಎಂದು ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ಮಂಗಳವಾರ ಭಾಲ್ಕಿ ಪುರಸಭೆಯಲ್ಲಿ ನಡೆದ ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಮಾಜದ ನೆಲೆಯಾದ ಈ ಪರಿಶ್ರಮಿ ಕಾರ್ಮಿಕರ ಪರಿಶ್ರಮವಿಲ್ಲದೆ ಸುಂದರ ಹಾಗೂ ಆರೋಗ್ಯಕರ ಸಮಾಜ ಸಾಧ್ಯವಿಲ್ಲ, ಪೌರ ಕಾರ್ಮಿಕರ ಕಲ್ಯಾಣ, ಗೌರವ ಮತ್ತು ಭದ್ರತೆಗಾಗಿ ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ. ಅವರ ಜೀವನಮಟ್ಟ ಸುಧಾರಣೆಗೆ ನೂತನ ಯೋಜನೆಗಳು ಮತ್ತು ಕಲ್ಯಾಣ ಕಾರ್ಯಕ್ರಮಗಳನ್ನು ನಿರಂತರವಾಗಿ ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರುಗಳು ಹಾಗೂ ಪೌರಕಾರ್ಮಿಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಚರ್ಮಗಂಟು ರೋಗ ಲಸಿಕೆಗೆ ಹಾರಕೂಡ ಶ್ರೀ ಚಾಲನೆ

**ಬಸವಕಲ್ಯಾಣ ಸೆ.25–** ತಾಲೂಕಿನ ಹಾರಕೂಡ ಪಶುಚಿಕಿತ್ಸಾಲಯ ವತಿಯಿಂದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಂದ ಗೋಮಾತೆಗೆ ಪೂಜೆ ಸಲ್ಲಿಸಿ ಜಾನುವಾರಗಳಿಗೆ ಚರ್ಮ ಗಂಟು ರೋಗದ ಲಸಿಕೆ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಮುಖ್ಯ ಪಶು ವೈದ್ಯಾಧಿಕಾರಿ ಡಾ. ಮಂಜುನಾಥ ಹಳ್ಳಿ, ಹಾರಕೂಡ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಹಾದೇವ ಪೂಜಾರಿ, ಪಶು ವೈದ್ಯಕೀಯ ಪರೀಕ್ಷಕರಾದ ಮಲ್ಲಿಕಾರ್ಜುನ ಹತ್ತರಕೆ, ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮುಖ್ಯ ಪಶುವೈದ್ಯಾಧಿಕಾರಿಗಳಾದ ಮಂಜುನಾಥ ಹಳ್ಳಿ ಮಾತನಾಡಿ ರೈತರು ತಮ್ಮ ರಾಸುಗಳಿಗೆ ಘನ ಸರ್ಕಾರದ ವತಿಯಿಂದ ಉಚಿತವಾಗಿ ನೀಡುತ್ತಿರುವ ಚರ್ಮ ಗಂಟು ರೋಗದ ಲಸಿಕೆ ಹಾಕಿಸಬೇಕೆಂದು ಮನವಿ ಮಾಡಿಕೊಂಡರು.

ಯುವ ಮಾರ್ಗ

ಶುಕ್ರವಾರ : 26-09-2025

## ಸೆ.29 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

**ರಾಯಚೂರು,ಸೆ.25** ಇಲ್ಲಿನ ಜಿಲ್ಲಾಡಳಿತದ ವತಿಯಿಂದ ಅಕ್ಟೋಬರ 07 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಆಚರಿಸುವ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯನ್ನು ಸೆಪ್ಟೆಂಬರ್ 29ರ ಮಧ್ಯಾಹ್ನ 04 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

## ಸ್ವಯಂ ಸೇವಕರಾಗಲು ನೋಂದಣಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.25**–ಜಿಲ್ಲಾ ಸಮಾದೇಷ್ಟರವರ ಕಾರ್ಯಾಲಯ, ಗೃಹರಕ್ಷಕದಳದಿಂದ ನಾಗರೀಕ ರಕ್ಷಣಾ ಸ್ವಯಂ ಸೇವಕರಾಗಲು ನೋಂದಣಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ಯುದ್ಧದಂತಹ ಸಂದರ್ಭಗಳಲ್ಲಿ ಉಂಟಾಗುವ ಸಂಭವನೀಯ ಅಪಘಾತಗಳಿಂದ ಸಾರ್ವಜನಿಕರನ್ನು ರಕ್ಷಕಿಸುವ ಬಗ್ಗೆ ಸ್ವಯಂ ಸೇವಕರ ಅಗತ್ಯವಿರುವುದರಿಂದ ಸಿವಿಲ್ ಡಿಫೆನ್ಸ್ ಆಕ್ಟ್ 1968 ರಂತೆ ಪ್ರತಿ 100 ನಾಗರೀಕರಿಗೆ ಒಬ್ಬರಂತೆ ಒಟ್ಟು 1000 ಜನ ಸೇವಾ ಮನೋಭಾವವುಳ್ಳ ಪೌರರಕ್ಷಣಾ ಸ್ವಯಂ ಸೇವಕರರು 19 ವರ್ಷ ಮೇಲ್ಪಟ್ಟ ಹಾಗೂ 4ನೇ ತರಗತಿ ಉತ್ತೀರ್ಣರಾದವರು ವೆಬ್‌ಸೈಟ್ ವಿಳಾಸ: www.civildefencewarriors.gov.in ನಲ್ಲಿ ಅಕ್ಟೋಬರ್ 25ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ದೈಹಿಕವಾಗಿ ಸಧೃಡವಾಗಿರಬೇಕು. ನಾಗರೀಕ ಪೌರರಕ್ಷಣಾ ಸ್ವಯಂ ಸೇವಕ ಸಂಸ್ಥೆಯಾಗಿದ್ದು, ಯಾವುದೇ ಮಾಸಿಕ ವೇತನ ಇರುವದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಗೃಹರಕ್ಷಕದಳ ಕಚೇರಿ ದೂರವಾಣಿ ಸಂಖ್ಯೆ: 08532-221679, ಲಾಲಸಾಬ್ ಪೆಂಡಾರೆ, ಸಹಾಯಕ ಬೋಧಕರ ಮೊಬೈಲ್ ಸಂಖ್ಯೆ: 9632410177 ಅಥವಾ ಶಕ್ತಿನಗರ ಪೌರರಕ್ಷಣಾ ಕಚೇರಿ ಮೌನಾ ಯೂನಿಟ್ ಆಫೀಸರ್ ಮೊಬೈಲ್ ಸಂಖ್ಯೆ: 9741333806ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಸಮಾದೇಷ್ಟರು, ಗೃಹರಕ್ಷಕ ದಳದ 2ನೇ ಹೆಚ್ಚುವರಿ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕಡೆ ಸೆ.27ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಸೆ.25**–ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ವ್ಯಾಪ್ತಿಯ ಕೆ.ಪಿ.ಟಿ.ಸಿ.ಎಲ್ ಮಲಿಯಾಬಾದ್ 110ಕೆವಿಯಲ್ಲಿ ದುರಸ್ತಿ ಕಾಮಗಾಗಿ ನಿರ್ವಹಿಸುತ್ತಿರುವ ಪ್ರಯುಕ್ತ ಸೆ.27ರ ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 9ಗಂಟೆಯಿಂದ ನಗರದ ಕೇಂದ್ರೀಯ ವಿದ್ಯಾಲಯ ಶಾಲೆ, ಮಲ್ಲಿಕಾರ್ಜುನ ಲೇಔಟ್, ಪದ್ಮಾವತಿ ಕಾಲೋನಿ, ಸಾಯಿಪ್ರಿಯ ಲೇಔಟ್, ಇಂಜಿನೀರ್ಸ್ ಕಾಲೋನಿ, ಕೃಷ್ಣಗಿರಿ ಹಿಲ್ಸ್, ರಾಯಲ್ ಫೋರ್ಟ್, ಅನುಷಾ ನಗರ, ಆರ್.ಓ.ಓ ಆಫೀಸ್, ಸತ್ಯನಾಥ ಕಾಲೋನಿ, ಜಹಿರಾಬಾದ್, ಮಂಗಲವಾರ್ ಪೇಟೆ, ಜಾನಿ ಮೊಹಲ್ಲಾ, ಜಿ.ಡಿ.ತೋಟ, ಗೀತಾ ಮಂದಿರ್, ಪಟೇಲ್ ರೋಡ್, ಬ್ರೇಸ್ತ್ ವಾರಪೇಟೆ, ಪದ್ಮಾನಾಭ ಟಾಕೀಸ್, ನೇತಾಜಿ ನಗರ, ಅಶೋಕ್ ನಗರ, ಕೆ.ಎಸ್.ಆರ್.ಟಿ.ಸಿ ಡಿಪೋ, ಬಿ.ಆರ್.ಬಿ.ಸರ್ಕಲ್, ಯರಗೇರಾ ಲೇಔಟ್, ಗಂಗಾಪರಮೇಶ್ವರಿ ಲೇಔಟ್, ಮಾರುತಿ ನಗರ, ಐಡಿಎಸ್‌ಎಮ್‌ಟಿ ಲೇಔಟ್, ಐಬಿ ರೋಡ್, ಜ್ಯೋತಿ ಕಾಲೋನಿ, ಎಸ್‌ಬಿಹೆಚ್ ಕಾಲೋನಿ, ಅಲ್ಲಮಪ್ರಭು ಲೇಔಟ್, ಆರ್.ಆರ್.ಕಾಲೋನಿ, ಬಷೀರ್ ಬಾಗ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.27ರಂದು ಮಲಿಯಬಾದ್ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು,ಸೆ.25**–ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗ ವ್ಯಾಪ್ತಿಯ ಮಲಿಯಬಾದ್ 110/11ಕೆವಿ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿ ಪ್ರಯುಕ್ತ ಸೆಪ್ಟೆಂಬರ್ 27ರ ಬೆಳಗ್ಗೆ 10.30ಗಂಟೆಯಿಂದ ಸಂಜೆ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

## ಎನ್‌ಎಸ್‌ಎಸ್ ವಿದ್ಯಾರ್ಥಿಗಳಲ್ಲಿ ಸೇವಾಭಾವನೆ ಮೂಡಿಸುತ್ತದೆ : ಮಹಿಬೂಬ್ ಮದ್ಲಾಪುರ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25**–ರಾಷ್ಟ್ರೀಯ ಸೇವಾಯೋಜನೆಯಲ್ಲಿ ಸೇರಿದ ಪ್ರತಿಯೊಬ್ಬ ಶಿಬಿರಾರ್ಥಿಗಳನ್ನು ಸಾಮಾಜಿಕವಾಗಿ ಅಭಿವೃದ್ಧಿ ದೃಷ್ಟಿ ಕೋನದಿಂದ ಸೇವಾಭಾವನೆ ಬೆಳಿಸಿ ಸಮುದಾಯಗಳಲ್ಲಿ ಜಾಗೃತಿ, ಸರ್ಕಾರದ ಯೋಜನೆಗಳ ಬಗ್ಗೆ ಪರಿಸರ ಕಾಳಜಿ, ಸಾಂಸ್ಕೃತಿಕ ಕ್ಷೇತ್ರದಲ್ಲಿ ಪ್ರತಿಭೆಗಳನ್ನು ಹೊರಹಾಕಲು ಇದು ವೇದಿಕೆ" ಎಂದು ಸಂಯೋಜಕ ಮಹಿಬೂಬ್ ಮದ್ಲಾಪುರ ಹೇಳಿದರು.

ಪಟ್ಟಣದ ಶ್ರೀವೆಂಕಟೇಶ್ವರ ಪದವಿ ಮಹಾವಿದ್ಯಾಲಯ, ಘಟಕ ಮಾನ್ವಿ ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆ ದಿನಾಚರಣೆ ಮೂಲಕ ಆರಂಭವಾಗಿ ಪ್ರತಿಜ್ಞಾವಿಧಿ ಬೋಧಿಸಿ ಕಾರ್ಯಕ್ರಮ ಮಾಡಲಾಯಿತು.

ಉಪನ್ಯಾಸಕ ಅಂಬಣ್ಣ ಮಾತನಾಡಿ "ಸಮಾಜ ಕಾಳಜಿ ಪ್ರತಿಯೊಬ್ಬರ ಕರ್ತವ್ಯ ವ್ಯಕ್ತಿ ಸಮಾಜದ ಬದಲಾವಣೆಗಾಗಿ ಶ್ರಮಿಸಬೇಕು, ವಿದ್ಯಾರ್ಥಿಗಳ ಪ್ರತಿಭೆ ಹೊರ ಹಾಕಿಕೊಳ್ಳಲು ಮತ್ತು ನಾಯಕತ್ವ ಗುಣಗಳನ್ನು ಪಡೆಯಲು ಇದು ಸೂಕ್ತವಾ



ದುದ್ದು" ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ಪ್ರಾಚಾರ್ಯ ಶಂಕ್ರಪ್ಪ ಅಂಗಡಿ ವಹಿಸಿದ್ದರು. ಸಂಸ್ಥೆ ಅಧ್ಯಕ್ಷ ಆಂಜನೇಯ ನಸಲಾಪುರ, ರೇಣುಕಾ ಚಿಮ್ಲಾಪುರ, ಆಫ್ರೀನಾ ಬೇಗಂ,ಸಂತೋಷ್ ಹಾಗೂ ವಿದ್ಯಾರ್ಥಿಗಳು ಇದ್ದರು. ರೇಣುಕಾ ಬಲ್ಲಟಗಿ ಪ್ರಾರ್ಥಿಸಿದರೆ, ಜಿಎಸ್ ಪ್ರದೀಪ್ ಕುಮಾರ ಸ್ವಾಗತಿಸಿದರು,ವಂದನಾ ವಂದಿಸಿದರು.

## ಕಟಕನೂರಿನಲ್ಲಿ ಆದಿ ಕರ್ಮ ಯೋಗಿ ಅಭಿಯಾನ: ಬುಡಕಟ್ಟು ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಒತ್ತು

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.25**– ತಾಲೂಕಿನ ಕಟಕನೂರು ಗ್ರಾಮದಲ್ಲಿ ಆದಿ ಕರ್ಮ ಯೋಗಿ ಅಭಿಯಾನದ ಅರಿವು ಮೂಡಿಸುವ ಕಾರ್ಯಕ್ರಮದ ಅಂಗವಾಗಿ "ದರ್ತಿ ಆಭಾ ಜನಜಾತಿ ಗ್ರಾಮ ಉತ್ಕರ್ಷ" ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಗ್ರಾಮ ನಡಿಗೆ, ಜಾಗೃತಿ ಜಾಥಾ ಮತ್ತು ಗ್ರಾಮ ಸಮುದಾಯದವರೊಂದಿಗೆ ಸಂವಾದ ನಡೆಸುವ ಮೂಲಕ ಬುಡಕಟ್ಟು ಜನಾಂಗದವರ ಸಮಸ್ಯೆಗಳನ್ನು ಆಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲ್ಲೂಕು ಪರಿಶಿಷ್ಟ ಕಲ್ಯಾಣ ಅಭಿವೃದ್ಧಿ ಅಧಿಕಾರಿಮತಿ ರುಕ್ಮಿಣಿ, ಜಾತಾದ ಉದ್ದೇಶ ಮತ್ತು ಗುಂಪು ಸಭೆಯಲ್ಲಿ ಸಮುದಾಯದವರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿದರು. ಶಿಕ್ಷಣ, ಆರೋಗ್ಯ, ಮೂಲಭೂತ ಸೌಕರ್ಯಗಳು, ರಸ್ತೆ ಸಂಪರ್ಕ, ದೂರಸಂಪರ್ಕ, ಕುಡಿಯುವ ನೀರು, ವಸತಿ, ಮತ್ತು ಕೌಶಲ್ಯ ತರಬೇತಿಯ ಲಭ್ಯತೆ ಸೇರಿದಂತೆ 29 ಅಂಶಗಳ ಕುರಿತು ಸಮುದಾಯದ ಮುಖಂಡರು ಮತ್ತು ಗ್ರಾಮಸ್ಥರೊಂದಿಗೆ ಸಂವಾದ ನಡೆಸಿ ಅಗತ್ಯ ಮಾಹಿತಿ ಪಡೆದುಕೊಂಡರು.

ಸ್ವಯಂ ಸೇವಾ ಸಂಸ್ಥೆಯ ವಿನಾಯಕ. ಆರ್ ಮಾತನಾಡಿ, "ಆದಿ ಕರ್ಮ ಯೋಗಿ" ಕೇಂದ್ರ ಸರ್ಕಾರದ ಮಹತ್ವದ ಯೋಜನೆಯಾಗಿದ್ದು, ಇದು ಬುಡಕಟ್ಟು ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿಗಾಗಿ ಜಾರಿಗೆ ಬಂದಿದೆ. ಇದುವರೆಗೆ ಈ ವರ್ಗದವರಿಗೆ ದೊರೆತಿರುವ ಸೌಲಭ್ಯಗಳು ಮತ್ತು ಭವಿಷ್ಯದಲ್ಲಿ ಜಾರಿಗೊಳಿಸಬಹುದಾದ ಕಾರ್ಯಕ್ರಮಗಳ ಕುರಿತು ಗ್ರಾಮಸ್ಥರಿಗೆ ಮಾಹಿತಿ



ನೀಡಿದರು. ಗ್ರಾಮದ ಜನರು ತಮ್ಮ ಸಮಸ್ಯೆಗಳನ್ನು ಪಟ್ಟಿ ಮಾಡಿ, ಗ್ರಾಮದಲ್ಲಿಯೇ ಆದಿ ಕರ್ಮ ಯೋಗಿ ಸೇವಾ ಕೇಂದ್ರವನ್ನು ಸ್ಥಾಪಿಸುವ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ತಿಳಿಸಿದರು. ಇದರಿಂದ ಪ್ರತಿಯೊಬ್ಬ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳ ಮಾಹಿತಿ ತಲುಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದ ಭಾಗವಾಗಿ, ಆದಿ ಕರ್ಮ ಯೋಗಿ ತಂಡದವರಿಂದ ಗ್ರಾಮದ ಮುಖ್ಯ ರಸ್ತೆಯಲ್ಲಿ ಜಾಗೃತಿ ಜಾಥಾ ನಡೆಸಲಾಯಿತು. ಜಾಥಾದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯ ಸಿಬ್ಬಂದಿಗಳಾದ ಸುರೇಶ, ವಿನಾಯಕ, ಭೀಮಯ್ಯ, ಲಿಂಗಪ್ಪ, ಸಮುದಾಯದ ಮುಖಂಡರು, ಯುವಕರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು ಭಾಗವಹಿಸಿದ್ದರು.

## ಶ್ರೀಅನ್ನದಾನ ಸ್ವಾಮಿಗಳಿಂದ ಪಟ್ಟಣದಲ್ಲಿ ಧಾರ್ಮ ಜಾಗೃತಿಗಾಗಿ ಪದಾಯಾತ್ರೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.25**– ಪಟ್ಟಣದ ಜಯನಗರದಲ್ಲಿ ಇಲಕಲ್ ಗುಡೂರು ಹಿರೇಮಠದ ಶ್ರೀ ಅನ್ನದಾನ ಸ್ವಾಮಿಗಳು ಧಾರ್ಮ ಜಾಗೃತಿಗಾಗಿ ಪದಾಯಾತ್ರೆ ನಡೆಸಿದರು ಹಾಗೂ ಈ ವೇಳೆ ಭಕ್ತರಿಗೆ ಇಷ್ಟಲಿಂಗ ಮಹಾತ್ವದ ಕುರಿತು ತಿಳಿಸಿ ಪ್ರತಿಯೊಬ್ಬರು ಕೂಡ ಅಂಗದ ಮೇಲೆ ಇಷ್ಟ ಲಿಂಗವನ್ನು ಧಾರಣೆ ಮಾಡಿಕೊಂಡು ನಿತ್ಯ ಇಷ್ಟಲಿಂಗ ಪೂಜೆಯನ್ನು ಮಾಡಿದಲ್ಲಿ ನಮ್ಮ ಅಂಗೈಯಲ್ಲಿಯೇ ಶಿವನನ್ನು ಕಾಣಬಹುದು ಹಾಗೂ ಲಿಂಗಾಗ ಸಾಮಾರಸ್ಯವನ್ನು ಹೊಂದಬಹುದಾಗಿದೆ ಇಂತಹ ಇಷ್ಟಲಿಂಗವನ್ನು ಗುರುಗಳಿಂದ ಪಡೆದು ಧೀಕ್ಷೆಯನ್ನು ಹೊಂದಬೇಕು ಮಾನ್ವಿ ಕಲ್ಮಠ ದಸರಾ ಮಹೋತ್ಸವ ಕಾರ್ಯಕ್ರಮದ ಅಮಗವಾಗಿ ನಡೆಯುವ ಕಾರ್ಯಕ್ರಮಕ್ಕೆ ಸೆ.4 ಮತ್ತು 5 ರಂದು ಶ್ರೀ ಶೈಲ ಜಗದ್ಗುರುಡಾ.ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಆಗಮಿಸಿ ಇಷ್ಟಲಿಂಗ ಮಹಾ ಪೂಜೆಯನ್ನು ನೆರವೇರಿಸಿ ಅಸಕ್ತ ಭಕ್ತರಿಗೆ ಲಿಂಗಧೀಕ್ಷೆಯನ್ನು



ನೀಡಲಿರುವುದರಿಂದ ಜಂಗಮ ವಟುಗಳು ಅಯ್ಯಚಾರ ಧೀಕ್ಷೆ ಹಾಗೂ ಸರ್ವ ಸಮುದಾಯದವರು ಮತ್ತು ಮಹಿಳೆಯರು ಕೂಡ ಜಗದ್ಗುರುಗಳಿಂದ ಲಿಂಗಧೀಕ್ಷೆಯನ್ನು ಪಡೆಯುವ ಅವಕಾಶವಿದ್ದು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಹೆಸರುಗಳನ್ನು ಕಲ್ಮಠದಲ್ಲಿ ನೊಂದಾಯಿಸಿಕೊಳ್ಳುವಂತೆ ಕೋರಿದರು.

## ಸಾರ್ವಜನಿಕರ ಸೌಲಭ್ಯಕ್ಕೆ ಮೀಸಲಿಟ್ಟ ಜಾಗವನ್ನು ಹದ್ದುಬಸ್ತ ಮಾಡಿ : ಕರವೇ ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.25**– ಪುರಸಭೆ ವ್ಯಾಪ್ತಿಯ ಲೇಔಟ್ ಗಳಲ್ಲಿ ಇರುವ ಗಾರ್ಡನ್ ಮತ್ತು ಸಾರ್ವಜನಿಕ ಸೌಲಭ್ಯಕ್ಕೆ ಮೀಸಲಿಟ್ಟ ನಿವೇಶನಗಳನ್ನು ಹದ್ದುಬಸ್ತು ಮಾಡಿ ಎಂದು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.



ಪುರಸಭೆ ಉಧ್ಯಾನವನ ಹಾಗೂ ನಾಗರಿಕ ಸೌಲಭ್ಯಕ್ಕಾಗಿ ಮೀಸಲಿಟ್ಟ ಜಾಗಗಳಲ್ಲಿ ಕೆಲವರು ಅಕ್ರಮವಾಗಿ ಅಶಿಕ್ರಮಣ ಮಾಡಿಕೊಂಡಿದ್ದಾರೆ. ಇನ್ನು ಕೆಲವೆಡೆ ಲೇಔಟ್ ಮಾಲೀಕರು ಸರಕಾರಿ ಜಾಗೆಯನ್ನು ಲೇಔಟ್ ಗಳಾಗಿ ಪರಿವರ್ತಿಸಿ ಮಾರಾಟ ಮಾಡಿಕೊಂಡಿದ್ದಾರೆ. ಇದಕ್ಕೆ ಅಧಿಕಾರಿಗಳ ಸಾಥ್ ಇದ್ದು, ಇತ್ತೀಚೆಗೆ ಅಧಿಕಾರಿಗಳು ಅಮಾನತ್ತು ಆಗಿರುವುದೇ ಇದಕ್ಕೆ ಸಾಕ್ಷಿಯಾಗಿದೆ. ಕೂಡಲೇ ಪುರಸಭೆ ವ್ಯಾಪ್ತಿಯಲ್ಲಿನ ಗಾರ್ಡನ್, ಸಿಎ ಸೈಟ್‌ಗಳಲ್ಲಿ ಬೋರ್ಡ್ ಹಾಕಬೇಕು. ಹದ್ದುಬಸ್ತು ಮಾಡಿ ಸಾರ್ವಜನಿಕ ಉಪ ಯೋಗಕ್ಕೆ ಮೀಸಲಿರಿಸಬೇಕು. ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ ಎಲ್.ನಾಯಕ, ಶಿವು ಪತ್ತಾರ, ಭೀಮೇಶ ನಾಯಕ, ಪ್ರೇಮಕುಮಾರ, ಮಹ್ಮದ್ ಕೈಫ್, ದೇವರಾಜ, ನಾಗರಾಜ, ಅಭಿಷೇಕ್, ಮೌನೇಶ ಸೇರಿ ಇತರರಿದ್ದರು.

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಸಹಾಯವಾಣಿ ಕೇಂದ್ರ ಸ್ಥಾಪನೆ

**ರಾಯಚೂರು,ಸೆ.25**– ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ಕಾರ್ಯವನ್ನು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 07ರವರೆಗೆ ನಡೆಯುತ್ತಿದ್ದು, ಈ ಸಮೀಕ್ಷಾ ಕಾರ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಪ್ರತಿನಿತ್ಯ ಬರುವ ಮಾಹಿತಿ, ದೂರು, ಆಕ್ಷೇಪಣೆ ಹಾಗೂ ಸಲಹೆ ಇತ್ಯಾದಿ ಬಗ್ಗೆ ಕರೆಗಳನ್ನು ಸ್ವೀಕರಿಸಿ ಸೂಕ್ತ ಮಾಹಿತಿ ನೀಡಲು ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದೆಂದು ಅಪರ ಜಿಲ್ಲಾಧಿಕಾರಗಳಾದ ಶಿವಾನಂದ ಅವರು ತಿಳಿಸಿದ್ದಾರೆ.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಲಾಗಿದ್ದು, ದೂರವಾಣಿ ಸಂಖ್ಯೆ 08532-226383ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಗೆ ವಿವಿಧ ಸಂಘಟನೆಯ ಮುಖಂಡರು ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.27ರಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆ

**ರಾಯಚೂರು,ಸೆ.25**– ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಶಿಕ್ಷಣ ಇಲಾಖೆ, ಪುರತತ್ವ ಸಂಗ್ರಹಾಲಯಗಳು & ಪರಂಪರೆ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸೆ.27ರ ಬೆಳಿಗ್ಗೆ 9.30ಗಂಟೆಗೆ ನಗರದ ನವರಂಗ್ ದರವಾಜ ಕೋಟೆಯಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ-2025ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ದೀಪಾ ಚೋಳನ್, ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾದ ಅಕ್ರಂ ಪಾಷ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಜೀರ ಅಹ್ಮದ್ ಕನವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H